# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 104 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 02–11–2023 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 104 | Title- Code: KARKAN 28269 | Chitradurga | Date: 02-11-2023 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಕನ್ನಡ ರಾಜ್ಯೋತ್ಸವ: 28 ಸಾಧಕರಿಗೆ ಸಚಿವರಿಂದ ಸನ್ಮಾನ 2
ಕರ್ನಾಟಕ 50ರ ಸಂಭ್ರಮ: ಕೋಟೆ ನಾಡಲ್ಲಿ ಮೊಳಗಿದ ಕನ್ನಡದ ಕಹಳೆ 3
ಕನ್ನಡ ನಾಡಿನ ಗರಿಮೆ, ಆದರ್ಶಗಳನ್ನು ಎತ್ತಿಹಿಡಿಯುವ ಸಂಕಲ್ಪ ಮಾಡೋಣ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಶಾಸಕ ಚಂದ್ರಪ್ಪರಿಂದ ಕನ್ನಡ ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪಾರ್ಚನೆ



» **ಹೊಳಲ್ಕೆರೆ**

ಹಿಂದುಳಿದ ಜನಾಂಗದ ಬಗ್ಗೆ ಅಪಾರವಾದ ಕಾಳಜಿಯಿಟ್ಟುಕೊಂಡಿದ್ದ ಧೀಮಂತ ನಾಯಕ, ಹಿಂದುಳಿದ ವರ್ಗಗಳ ಹರಿಕಾರ ದಿವಂಗತ ಡಿ.ದೇವರಾಜ ಅರಸುರವರು ಮೈಸೂರನ್ನು ಕರ್ನಾಟಕವೆಂದು ನಾಮಕರಣ ಮಾಡಿ ಇಂದಿಗೆ ಐವತ್ತು ವರ್ಷಗಳಾಗಿದೆ ಎಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಬಣ್ಣಿಸಿದರು.ಪಟ್ಟಣದ ಸಂವಿಧಾನಸೌಧದಲ್ಲಿ 68 ನೇ ಕನ್ನಡ ರಾಜ್ಯೋತ್ಸವದಲ್ಲಿ ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು.ಭಾರತದ ಭೂಪಟದಲ್ಲಿ ಕರ್ನಾಟಕ ರಾಜ್ಯಕ್ಕೆ ಅತ್ಯುತ್ತಮವಾದ ಸ್ಥಾನವಿದೆ. ಕನ್ನಡಕ್ಕೆ ಎಂಟು ಜ್ಞಾನಪೀಠ ಪ್ರಶಸ್ತಿಗಳು ಸಿಕ್ಕಿವೆ. ಭಾರತದ ಯಾವ ರಾಜ್ಯಕ್ಕೂ ಇಷ್ಟೊಂದು ಜ್ಞಾನಪೀಠ ಪ್ರಶಸ್ತಿಗಳು ದೊರತಿಲ್ಲ. ಕನ್ನಡ ನಾಡು, ನುಡಿ, ನೆಲ, ಜಲಕ್ಕೆ ವಿಶಿಷ್ಠತೆಯಿದೆ. ಕರ್ನಾಟಕದ ಕೆಲವೊಂದು ಭಾಗಗಳು ಹರಿದು ಹಂಚಿ ಹೋಗಿದ್ದನ್ನು ಒಂದುಗೂಡಿಸುವಲ್ಲಿ ಆಲೂರು ವೆಂಕಟರಾಯರು, ಮಾಜಿ ಮುಖ್ಯಮಂತ್ರಿ ದಿವಂಗತ ಎಸ್.ನಿಜಲಿಂಗಪ್ಪ ಸೇರಿದಂತೆ ಅನೇಕ ಹಿರಿಯರು ಹೋರಾಡಿದ್ದಾರೆ. ಎಲ್ಲಾ ಜಾತಿ ಧರ್ಮದವರು ಸಹೋದರತ್ವದಿಂದ ಬಾಳುತ್ತಿರುವುದು ಕರ್ನಾಟಕದ ವಿಶೇಷ ಎಂದು ಗುಣಗಾನ ಮಾಡಿದರು.ಕನ್ನಡ ಭಾಷೆಗೆ ಕೇಂದ್ರ ಸರ್ಕಾರ ಶಾಸ್ತ್ರೀಯ ಸ್ಥಾನಮಾನ ನೀಡಿದೆ. ವಿದ್ಯಾರ್ಥಿಗಳು ಶಿಕ್ಷಣವಂತರಾಗುವುದರ ಜೊತೆಗೆ ಬುದ್ದಿವಂತರಾಗಿ ಗುರು–ಹಿರಿಯರು ತಂದೆ–ತಾಯಿಗಳಿಗೆ ಕೀರ್ತಿ ತರುವಂತಾಗಬೇಕು. ಅಧಿಕಾರ ಶಾಶ್ವತವಲ್ಲ. ಇರುವಷ್ಟು ದಿನ ಹತ್ತಾರು ಜನಕ್ಕೆ ಉಪಯೋಗವಾಗುವ ರೀತಿಯಲ್ಲಿ ಕೆಲಸ ಮಾಡಿಕೊಂಡು ಬರುತ್ತಿದ್ದೇನೆ. ಸಾರ್ವಜನಿಕರ ಬದುಕನ್ನು ಸ್ವಂತ ಬದುಕೆಂದು ತಿಳಿದಿದ್ದೇನೆ. ಗುಣಮಟ್ಟದ ಶಾಲಾ–ಕಾಲೇಜುಗಳನ್ನು ನಿರ್ಮಿಸಲಾಗಿದೆ. ತಹಶೀಲ್ದಾರ್ ಶ್ರೀಮತಿ ಬೀಬಿ ಫಾತಿಮ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ರವಿಕುಮಾರ್, ಪುರಸಭೆ ಮುಖ್ಯಾಧಿಕಾರಿ ಎ.ವಾಸೀಂ, ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಶಿವಮೂರ್ತಿ, ಕರ್ನಾಟಕ ರಕ್ಷಣಾ ವೇದಿಕೆ ಅಧ್ಯಕ್ಷ ಹನುಮಂತಪ್ಪ, ರಾಜ್ಯ ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಲೋಕೇಶ್, ಕ್ಷೇತ್ರ ಶಿಕ್ಷಣಾಧಿಕಾರಿ ಶ್ರೀನಿವಾಸ್, ಪುರಸಭೆ ಸದಸ್ಯರುಗಳಾದ ಅಶೋಕ್, ಕೆ.ಸಿ.ರಮೇಶ್, ಪಿ.ಎಂ.ಮುರುಗೇಶ್, ಮಲ್ಲಿಕಾರ್ಜುನಸ್ವಾಮಿ, ವಿಜಯ, ನಾಗರತ್ನ ಜಯಸಿಂಹ ಕಾಟ್ರೋಚ್, ಪೂರ್ಣಿಮ ಬಸವರಾಜ್ ಕನ್ನಡ ರಾಜ್ಯೋತ್ಸವದಲ್ಲಿ ಭಾಗವಹಿಸಿದ್ದರು.

### ಭದ್ರಾ ನಾಲೆಗಳಲ್ಲಿನ ಅಕ್ರಮ ಪಂಪ್‌ಸೆಟ್‌ಗಳನ್ನು ತೆರವು ಗೊಳಿಸಲು ಜಿಲ್ಲಾಧಿಕಾರಿ ಸೂಚನೆ

» **ದಾವಣಗೆರೆ**


ಮಳೆಯ ಕೊರತೆಯಿಂದಾಗಿ ಜಲಾಶಯದಲ್ಲಿ ನೀರಿನ ಸಂಗ್ರಹ ಕಡಿಮೆ ಇರುವುದರಿಂದ ಮತ್ತು ನಾಲೆ ಮೂಲಕ ಅಚ್ಚುಕಟ್ಟುದಾರರ ಬೆಳೆಗಳಿಗೆ ನೀರು ಕೊಡಬೇಕಾಗಿರುವುದರಿಂದ ಭದ್ರಾ ನಾಲೆಗಳಲ್ಲಿ ಅಕ್ರಮವಾಗಿ ಅಳವಡಿಸಿರುವ ಪಂಪ್‌ಸೆಟ್‌ಳನ್ನು ತೆರವುಗೊಳಿಸಬೇಕೆಂದು ನೀರಾವರಿ ಇಲಾಖೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ಸೂಚನೆ ನೀಡಿದರು. ಜಿಲ್ಲೆಯಲ್ಲಿ ಮಳೆಯ ಕೊರತೆಯಿಂದಾಗಿ ನೀರಿನ ಅಭಾವ ಉಂಟಾಗಲಿದ್ದು, ಭದ್ರಾ ಅಚ್ಚುಕಟ್ಟು ಪ್ರದೇಶಗಳಿಗೆ ಆನ್ ಅಂಡ್ ಆಫ್ ವ್ಯವಸ್ಥೆಯನ್ನು ಕೈಗೊಳ್ಳಲಾಗಿದೆ. ಈಗಾಗಲೇ ಅಕ್ಟೋಬರ್ 26 ರಿಂದ ಭದ್ರಾ ಎಡದಂಡೆಗೆ 380 ಕ್ಯೂಸೆಕ್ಸ್ ಹಾಗೂ ಭದ್ರಾ ಬಲದಂಡೆಗೆ 3100 ಕ್ಯೂಸೆಕ್ಸ್ ನೀರನ್ನು ಹರಿಸಲಾಗಿದೆ. ಬೆಸ್ಕಾಂ ಅಧಿಕಾರಿಗಳು ಭದ್ರಾ ನಾಲೆಗಳಲ್ಲಿ ಅಕ್ರಮವಾಗಿ ಅಳವಡಿಸಿರುವ ಪಂಪ್‌ಸೆಟ್‌ಗಳನ್ನು ತೆರವುಗೊಳಿಸಬೇಕು ಮತ್ತು ಅಂತಹ ಪಂಪ್‌ಸೆಟ್ ಗಳಿಗೆ ವಿದ್ಯುತ್ ಸಂಪರ್ಕ ಕಡಿತಗೊಳಿಸಬೇಕು ಎಂದರು.

**ಹೆಸರಾಯಿತು ಕರ್ನಾಟಕ–ಉಸಿರಾಗಲಿ ಕನ್ನಡ ಹೆಸರಿನಲ್ಲಿ ಇಡೀ ವರ್ಷ ಸ್ವಾಭಿಮಾನಿ ಕನ್ನಡ ಸಾಂಸ್ಕೃತಿಕ ಸಂಭ್ರಮ**

ಹಿಂದಿನ ಬಿಜೆಪಿ ಸರ್ಕಾರ 50 ನೇ ವರ್ಷಕ್ಕೆ ಇದನ್ನು ಆಚರಿಸಬೇಕಿತ್ತು. ಅವರು ಆಚರಿಸಲಿಲ್ಲ. ಹೀಗಾಗಿ 50 ವರ್ಷ ತುಂಬಿದ ಸಂದರ್ಭದಲ್ಲಿ ನಾವು ಆಚರಿಸುತ್ತಿದ್ದೇವೆ

# ಇಂದಿನಿಂದ ಎಲ್ಲಾ ಸರ್ಕಾರಿ ಶಾಲೆಗಳಿಗೆ ಉಚಿತ ನೀರು ಮತ್ತು ವಿದ್ಯುತ್ ನೀಡಲಾಗುವುದು: ಸಿಎಂ





» **ಬೆಂಗಳೂರು**

ಇಂದಿನಿಂದ ಎಲ್ಲಾ ಸರ್ಕಾರಿ ಶಾಲೆಗಳಿಗೆ ಉಚಿತ ನೀರು ಮತ್ತು ವಿದ್ಯುತ್ ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಘೋಷಣೆ ಮಾಡಿದರು.

ಶಾಲಾ ಶಿಕ್ಷಣ ಸಾಕ್ಷರತಾ ಇಲಾಖೆ ಕಂಠೀರವ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ 68 ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಕನ್ನಡ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ಕನ್ನಡಿಗರನ್ನು ಆರ್ಥಿಕವಾಗಿ, ಸಾಮಾಜಿಕವಾಗಿ ಶಕ್ತಿಶಾಲಿಗಳನ್ನಾಗಿ ಮಾಡುವ ಜತೆಗೆ ಶಿಕ್ಷಣದ ಗುಣಮಟ್ಟ ಹೆಚ್ಚಿಸುವ, ಕನ್ನಡ ಶಾಲೆಗಳ ಮೂಲಭೂತ ಸವಲತ್ತುಗಳನ್ನು ಹೆಚ್ಚಿಸಲು ನಮ್ಮ ಸರ್ಕಾರ ನಿರಂತರವಾಗಿ ಶ್ರಮಿಸುತ್ತಿದೆ ಎಂದರು.

ದೇವರಾಜು ಅರಸು ಅವರು ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ಹೆಸರಿಟ್ಟು 50 ವರ್ಷಗಳು ತುಂಬಿವೆ. ಈ ದಿನ ನಾವು ಒಂದು ಪ್ರತಿಜ್ಞೆ ಮಾಡೋಣ. ಕನ್ನಡದಲ್ಲೇ ವ್ಯವಹರಿಸುವ ಪ್ರತಿಜ್ಞೆಯನ್ನು ನಾವು ಮಾಡುವ ಮೂಲಕ ನಮ್ಮ ತಾಯ್ನೆಲದ ಋಣ ತೀರಿಸುವ ಕೆಲಸ ಮಾಡೋಣ. ಇಲ್ಲಿ ವಾಸ ಮಾಡುವ ಪ್ರತಿಯೊಬ್ಬರೂ ಕನ್ನಡದ ವಾತಾವರಣವನ್ನು ಸೃಷ್ಟಿಸಬೇಕು, ಸಂಭ್ರಮಿಸಬೇಕು ಎಂದು ಕರೆ ನೀಡಿದರು. ಕನ್ನಡ ನೆಲದಲ್ಲಿದ್ದೂ ಕನ್ನಡ ಮಾತನಾಡದವರು ಹಲವು ಭಾಗಗಳಲ್ಲಿ ಇದ್ದಾರೆ. ನಮ್ಮ ಆಡಳಿತ ಭಾಷೆ ಕನ್ನಡ. ಆದ್ದರಿಂದ ನಾವು ಕನ್ನಡದಲ್ಲೇ ವ್ಯವಹರಿಸಬೇಕು. ಪ್ರತಿಯೊಬ್ಬರ, ಪ್ರತಿಯೊಂದು ಭಾಷೆಗೂ ನಾವು ಗೌರವ ಕೊಡಬೇಕು. ಆದರೆ ನಮ್ಮ ನಾಡಿನಲ್ಲಿ ವ್ಯವಹರಿಸುವಾಗ, ಆಡಳಿತದಲ್ಲಿ ಕನ್ನಡ ಬಳಕೆ ಆಗಬೇಕು. ಇದನ್ನು ಪ್ರತಿಯೊಬ್ಬ ಅಧಿಕಾರಿಯೂ ಚಾಚೂ ತಪ್ಪದೆ ಪಾಲಿಸಬೇಕು ಎಂದರು. ಕೇಂದ್ರ ಸರ್ಕಾರ ಕರ್ನಾಟಕದಲ್ಲಿ ಇಂಗ್ಲಿಷ್, ಹಿಂದಿಯಲ್ಲಿ ಮಾತ್ರ ಸ್ಪರ್ಧಾತ್ಮಕ ಪರೀಕ್ಷೆ ನಡೆಸುವುದನ್ನು ಒಪ್ಪಲು ಸಾಧ್ಯವಿಲ್ಲ. ಕನ್ನಡದಲ್ಲೂ ಪ್ರವೇಶ ಪರೀಕ್ಷೆ ನಡೆಸಲು ಈ ಹಿಂದೆಯೂ ಒತ್ತಾಯಿಸಿದ್ದೆ. ಅಗತ್ಯಬಿದ್ದರೆ ಮತ್ತೆ ಕೇಂದ್ರಕ್ಕೆ ಪತ್ರ ಬರೆದು ಒತ್ತಾಯಿಸುತ್ತೇನೆ ಎಂದರು.



ಕನ್ನಡದಲ್ಲಿ ಕಲಿತರೆ ಉದ್ಯೋಗ ಸಿಗುವುದಿಲ್ಲ, ಜ್ಞಾನ ಸಂಪಾದನೆ ಸಾಧ್ಯವಿಲ್ಲ ಎನ್ನುವ ತಪ್ಪು ಕಲ್ಪನೆಯಿಂದ ಇಂಗ್ಲಿಷ್ ಕಾನ್ವೆಂಟ್ ವ್ಯಾಮೋಹ ಬೆಳೆಸಿಕೊಂಡಿದ್ದಾರೆ. ಇದು ಸರಿಯಲ್ಲ. ಸಮಾಜದ ಎಲ್ಲಾ ಕ್ಷೇತ್ರಗಳಲ್ಲೂ ಕನ್ನಡ ಮಾಧ್ಯಮದಲ್ಲಿ ಕಲಿತವರು ಉನ್ನತ ಹುದ್ದೆಗಳಲ್ಲಿ ಇದ್ದಾರೆ. ಉನ್ನತ ಮಟ್ಟದ ಸಾಧನೆ ಮಾಡಿದ್ದಾರೆ ಎಂದು ಉದಾಹರಿಸಿದರು.

ಗುಣಮಟ್ಟದ ಶಿಕ್ಷಣ ಮತ್ತು ಉತ್ತಮ ಕಲಿಕಾ ವಾತಾವರಣ ಹಾಗೂ ಶಾಲೆಗಳ ಗುಣಮಟ್ಟ ಹೆಚ್ಚಿಸುವುದು , ಅಗತ್ಯ ಎಲ್ಲಾ ಸವಲತ್ತುಗಳನ್ನು ಒದಗಿಸುವುದು ನಮ್ಮ ಸರ್ಕಾರದ ಆದ್ಯತೆ ಎಂದರು.

ತಮ್ಮ ಮಕ್ಕಳನ್ನು ಅವರ ಇಷ್ಟದ ಭಾಷೆಯಲ್ಲಿ ಕಲಿಸುವುದು ಪೋಷಕರ ನಿರ್ಧಾರಕ್ಕೆ ಬಿಟ್ಟ ವಿಷಯ ಎಂದು ಸುಪ್ರೀಂಕೋರ್ಟ್ ಹೇಳಿದೆ. ಆದರೆ, ಮಾತೃಭಾಷೆಯ ಮಾಧ್ಯಮದಲ್ಲೇ ಕಲಿಯುವುದು ಅತ್ಯಂತ ವೈಜ್ಞಾನಿಕ ಎನ್ನುವುದನ್ನು ಗ್ರಹಿಸಬೇಕು ಎಂದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಪ್ರಾಥಮಿಕ ಶಿಕ್ಷಣ ಸಚಿವರಾದ ಮಧು ಬಂಗಾರಪ್ಪ, ಶಾಸಕ ರಿಜ್ವಾನ್ ಹರ್ಷದ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು ಸೇರಿ ಹಲವು ಗಣ್ಯರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

**ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿಕೆ**

# ತಾಯ್ನಾಡಿನ ಭಾಷೆಯ ಪ್ರೀತಿ, ವಾತ್ಸಲ್ಯದಿಂದ ನಾಡು ಬೆಳಗಲಿದೆ

» **ಚಿತ್ರದುರ್ಗ**

ತಾಯಿಯ ಮೇಲಿನ ಪ್ರೀತಿ ವಾತ್ಸಲ್ಯ ಹೇಗಿದೆಯೋ ಹಾಗೇ ತಾಯ್ನಾಡಿನ ಭಾಷೆಯ ಬಗ್ಗೆ ಪ್ರೀತಿ, ವಾತ್ಸಲ್ಯ ನಮ್ಮಲ್ಲಿ ಮೈಗೂಡಿಸಿಕೊಂಡಾಗ ಮಾತ್ರ ನಮ್ಮ ನಾಡು ಪ್ರಕಾಶಮಾನವಾಗಿ ಬೆಳಗಲಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ನಗರಸಭೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಪೊಲೀಸ್ ಇಲಾಖೆ ವತಿಯಿಂದ ನಗರದ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ಬುಧವಾರ ಕನ್ನಡ ರಾಜ್ಯೋತ್ಸವದ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ, ರಾಜ್ಯೋತ್ಸವ ಸಂದೇಶ ನೀಡಿದರು.

ದೇಶ ಕಟ್ಟುವ, ನಾಡು ಕಟ್ಟುವ ಮತ್ತು ಸಾಮರಸ್ಯಯುತ ಸಂಬಂಧಗಳನ್ನು ಬೆಸೆಯುವ ಸರ್ವಾಂಗೀಣ ಅಭಿವೃದ್ಧಿ ಸಾಧ್ಯವಾಗಿಸುವ ಕೆಲಸವನ್ನು ನಾವೆಲ್ಲಾ ಒಗ್ಗಟ್ಟಿನಿಂದ ಮಾಡಬೇಕಿದೆ. ಏಳು ದಶಕಗಳು ಕಳೆಯುತ್ತಾ ಬಂದರೂ ನಾಡು–ನುಡಿಗೆ ಸಂಬಂಧಿಸಿದಂತೆ ಕೆಲವೊಂದು ಸಮಸ್ಯೆಗಳು ಹಾಗೆಯೇ ಉಳಿದಿವೆ. ಕೆಲವೂ ಇನ್ನು ಹೆಚ್ಚು ಗಂಭೀರವಾಗಿವೆ. ಅವುಗಳಲ್ಲಿ ಪ್ರಮುಖವಾಗಿ ಗಡಿ ವಿವಾದ., ನೆರೆ ರಾಜ್ಯಗಳೊಂದಿಗಿನ ನೀರಿನ ಹಂಚಿಕೆ, ಮಣ್ಣಿನ ಮಕ್ಕಳಿಗೆ ಉದ್ಯೋಗದ ಆದ್ಯತೆ, ಮಾತೃಭಾಷೆಯಲ್ಲಿ ಶಿಕ್ಷಣ ಮುಂತಾದವುಗಳು ಸವಾಲುಗಳಾಗಿಯೇ ಮುಂದುವರಿದಿವೆ. ಕನ್ನಡ ನಾಡು. ಕಟ್ಟುವುದರೆಂದರೆ ನಮ್ಮನ್ನು ಕಟ್ಟಿಕೊಳ್ಳುತ್ತಲೇ ಕನ್ನಡದ ಎಲ್ಲಾ ಮನಸ್ಸು. ಹೃದಯಗಳನ್ನು ಬೆಸೆಯುವಂತಹದಾಗಿದೆ ಎಂದು ಅಭಿಪ್ರಾಯಪಟ್ಟರು.






ರಾಜ್ಯದ ಏಕೀಕರಣಕ್ಕೆ ತಮ್ಮ ತನು–ಮನಗಳನ್ನು ಪಣಕ್ಕಿಟ್ಟು ದುಡಿದು ದಣಿದ ದಿವ್ಯಚೇತನರು ಮತ್ತು 1973 ರಲ್ಲಿ ಮೈಸೂರು ರಾಜ್ಯವನ್ನು ಕರ್ನಾಟಕ ರಾಜ್ಯವನ್ನಾಗಿ ಮಾಡಿದ ಅಂದಿನ ಮುಖ್ಯಮಂತ್ರಿ ದಿವಂಗತ ಡಿ. ದೇವರಾಜ್ ಅರಸು ಅವರ ನುಡಿ, ನೆಲ ಮತ್ತು ಸಂಸ್ಕೃತಿಯ ಬಗೆಗಿನ ಭಾವನಾತ್ಮಕ ಪ್ರೇರಣೆ, ನಾಡುಕಟ್ಟುವ ಸಂಘಟಿತ ಪ್ರಯತ್ನಗಳಿಂದಾಗಿಯೇ ನಾವಿಂದು ಸ್ವಾಭಿಮಾನಿ ಕನ್ನಡದ ಪ್ರಜೆಗಳಾಗಿದ್ದೇವೆ. ಸರ್ವ ಜನಾಂಗದ ಶಾಂತಿಯ ತೋಟವಾಗಿದ್ದೇವೆ. ಬಸವಾದಿ ಶರಣರು ಕಟ್ಟಿದ ಅನುಭವ ಮಂಟಪ ಮತ್ತು ಪ್ರಜಾಸತ್ತಾತ್ಮಕ ಕಲ್ಯಾಣ ರಾಜ್ಯದ ವಾರಸುದಾರರಾಗಿದ್ದೇವೆ. ಮುಂದಿನ ದಿನಗಳಲ್ಲಿಯೂ ನಾವು ಈ ಅಸ್ಮಿತೆಗಳನ್ನು ಶ್ರೇಷ್ಠ ಸಾಂಸ್ಕೃತಿಕ ಮೌಲ್ಯಗಳನ್ನು, ಕಲ್ಯಾಣ ರಾಜ್ಯದ ಆದರ್ಶಗಳನ್ನು ಇವತ್ತಿನ ಭಾರತೀಯ ಸಂವಿಧಾನದ ಆಶಯದ ಬೆಳಕಿನಲ್ಲಿ ಬಿತ್ತಿ ಬೆಳೆಯುವ ಮೂಲಕ ದೇಶಕ್ಕೆ ಹಾಗೂ ವಿಶ್ವಕ್ಕೆ ಮಾದರಿಯಾಗುವ ಕನಸುಗಳನ್ನು ನಿತ್ಯವೂ ವಾಸ್ತವಗೊಳಿಸುವ ಕರ್ತವ್ಯದಲ್ಲಿ ವೇಗವಾಗಿ ಹೆಜ್ಜೆ ಹಾಕಬೇಕಾಗಿದೆ ಎಂದರು.

ರಾಜ್ಯದಲ್ಲಿ ಅಭಿವೃದ್ಧಿಯ ಹಾದಿಯಲ್ಲಿ ನಾವು ಸಾಕಷ್ಟು ಮುಂದುವರೆದಿದ್ದೇವೆ.ಕೃಷಿ–ಕೈಗಾರಿಕೆ–ಸೇವಾ ವಲಯಗಳಲ್ಲಿ ಬಹಳಷ್ಟು ಪ್ರಗತಿಯನ್ನು ಸಾಧಿಸಲಾಗಿದೆ. ನೀರಾವರಿ ಪ್ರದೇಶ ವಿಸ್ತಾರಗೊಂಡಿದೆ. ಚಿತ್ರದುರ್ಗ ಜಿಲ್ಲೆಯ ಬಹುದಿನಗಳ ಕನಸಾದ ಭದ್ರಾ ಮೇಲ್ದಂಡೆ ಯೋಜನೆ ಸಾಕಾರಗೊಂಡು ಬರದ ನಾಡು ಹಸಿರುನಾಡಾಗುವ ದಿನಗಳು ಕ್ಷಣಗಣನೆಯಲ್ಲಿವೆ ಎಂದರು.

ರಾಜ್ಯದಲ್ಲಿ ಸುಸ್ಥಿರ ಆಡಳಿತ ನೀಡುವ ದೃಷ್ಟಿಯಿಂದ, ಸುಮಧುರ ಸಾಮಾಜಿಕ ಬದುಕನ್ನು ಎಲ್ಲ ಜನವರ್ಗಗಳಿಗೆ ಕಟ್ಟಿಕೊಡುವ ಹೊಣೆಗಾರಿಕೆಯನ್ನು ಕರ್ನಾಟಕದ ಜನರು ನಮಗೆ ನೀಡಿದ್ದಾರೆ. ಐದು ಪ್ರಮುಖ ಭಾಗ್ಯ ಯೋಜನೆಗಳನ್ನೂ ಒಳಗೊಂಡಂತೆ ಚುನಾವಣೆ ಸಂದರ್ಭದಲ್ಲಿ ನೀಡಿರುವ ಬಹುತೇಕ ಎಲ್ಲ ಭರವಸೆಗಳನ್ನು ಈಡೇರಿಸಲು ವಿವಿಧ ಯೋಜನೆಗಳನ್ನು ಹಾಕಿಕೊಂಡು ಕಾಲಮಿತಿಯಲ್ಲಿ ಈಡೇರಿಸಲು ಕ್ರಮ ಕೈಗೊಂಡಿದ್ದೇವೆ. ಸರ್ವೋದಯ ನಮ್ಮ ಅಭಿವೃದ್ಧಿಯ ಸೂತ್ರವಾಗಿದ್ದು, ಸಾಮಾಜಿಕ ಶಾಂತಿ, ಸಾಮರಸ್ಯ ಬದುಕಿನ ಅನುಷ್ಠಾನದ ಆಡಳಿತ ಸೂಚಿಯಾಗಿದೆ. ಪರಿಶಿಷ್ಟ ಜಾತಿ, ವರ್ಗ, ಹಿಂದುಳಿದ ಜಾತಿ–ವರ್ಗಗಳು ಮಹಿಳೆಯರು, ಮಕ್ಕಳು ಹಾಗೂ ವಿಕಲಚೇತನರಿಗೆ ಉದ್ಯೋಗಾವಕಾಶ ಹೆಚ್ಚಿಸಲು ಯೋಜನೆಗಳನ್ನು ರೂಪಿಸಲಾಗುತ್ತಿದೆ ಎಂದರು.

## ಫಾಸ್ಟ್ ನ್ಯೂಸ್

### ಜೀವವಿಮಾ ನಿಗಮ ಗಟ್ಟಿಯಾಗಿ ನೆಲೆಯೂರಿ ಕಾರ್ಯನಿರ್ವಹಿಸಲು ತಿಪ್ಪೇಸ್ವಾಮಿ ಪ್ರೇರಕ ಶಕ್ತಿ



» **ಚಳ್ಳಕೆರೆ**

ಭಾರತೀಯ ಜೀವವಿಮಾ ನಿಗಮ ಜನಸಾಮಾನ್ಯರ ಆರ್ಥಿಕ ಸುಧಾರಣೆಯಲ್ಲಿ ಪ್ರಮುಖ ಪಾತ್ರವಹಿಸುತ್ತದೆ. ಸಾರ್ವಜನಿಕರಿಗೆ ಯಾವುದೇ ಸಂದರ್ಭದಲ್ಲೂ ಆರ್ಥಿಕ ಶಕ್ತಿ ತುಂಬಲು ಜೀವವಿಮಾನಿಗಮಸರ್ವರೀತಿಯಲ್ಲೂಸಜ್ಜಾಗಿದ್ದು, ನಿಗಮದ ಸರ್ವತೋಮುಖ ಅಭಿವೃದ್ದಿಗೆ ಸಹಕರಿಸಿದ ಎಲ್ಲರೂ ಅಭಿನಂದನಾರ್ಹರು ಎಂದು ಭಾರತೀಯ ಜೀವವಿಮಾ ನಿಗಮದ ಹಿರಿಯ ಶಾಖಾ ವ್ಯವಸ್ಥಾಪಕ ಚನ್ನಪ್ಪ ತಿಳಿಸಿದರು. ಅವರು, ಕಚೇರಿಯಲ್ಲಿ ಕಳೆದ ಸುಮಾರು 35 ವರ್ಷಗಳಿಂದ ಭಾರತೀಯ ಜೀವವಿಮಾ ನಿಗಮದ ಅಭಿವೃದ್ದಿ ಅಧಿಕಾರಿಯಾಗಿ ಕಾರ್ಯನಿರ್ವಹಿಸಿ ಸೇವೆ ಸಲ್ಲಿಸಿ ಸೇವೆಯಿಂದ ನಿವೃತ್ತರಾದ ಅಭಿವೃದ್ದಿ ಅಧಿಕಾರಿ ಬಿ.ತಿಪ್ಪೇಸ್ವಾಮಿಯವರನ್ನು ನಿಗಮದ ವತಿಯಿಂದ ಸನ್ಮಾನಿಸಿ ಮಾತನಾಡಿದರು. ಪ್ರಾರಂಭದ ಹಂತದಲ್ಲಿ ಜೀವವಿಮಾ ನಿಗಮ ಬೆಳವಣಿಗೆಗೆ ಉತ್ತಮ ವಾತಾವರಣವಿರಲಿಲ್ಲ. ಜನರೂಸಹ ನಿಗಮದ ಅಭಿವೃದ್ದಿಯ ಬಗ್ಗೆ ಜಾಗೃತರಾಗಿರಲಿಲ್ಲ. ಆದರೆ, ತಿಪ್ಪೇಸ್ವಾಮಿಯಂತಹ ಉತ್ತಮ ಅಭಿವೃದ್ದಿ ಅಧಿಕಾರಿ ತಮ್ಮದೇಯಾದ ಕಾರ್ಯಶೈಲಿಗಳ ಮೂಲಕ ನಿಗಮದ ಬೆಳವಣಿಗೆಗೆ ಪೂರ್ಣಪ್ರಮಾಣದಲ್ಲಿ ಶ್ರಮಿಸಿದ್ದಾರೆ. ಅವರ ಸೇವೆ ಸದಾ ಸ್ಮರಿಸುವೆ ಎಂದರು. ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ನಿರ್ಗಮನ ಅಭಿವೃದ್ದಿ ಅಧಿಕಾರಿ ಬಿ.ತಿಪ್ಪೇಸ್ವಾಮಿ, ನಾನೊಬ್ಬ ಸಾಮಾನ್ಯ ಪದವೀಧರನಾಗಿದ್ದು, ಜೀವವಿಮಾ ನಿಗಮದ ಬಗ್ಗೆ ಮಾಹಿತಿ ಪಡೆದು ಎಲ್ಲರ ಸಲಹೆಯಂತೆ ನಿಗಮಕ್ಕೆ ಪಾದರ್ಪಣೆ ಮಾಡಿದೆ. ನಾನು ನಿರೀಕ್ಷೆ ಮಾಡಿದ್ದಕ್ಕಿಂತಲೂ ಹೆಚ್ಚು ಸಹಕಾರ ಅಧಿಕಾರಿ ವರ್ಗ ನೀಡಿದೆ. ನಮ್ಮ ಏಜೆಂಟರೂ ಸಹ ಎಲ್ಲಾ ರೀತಿಯಲ್ಲೂ ನಮ್ಮೊಂದಿಗೆ ಉತ್ತಮ ಅಭಿವೃದ್ದಿಗೆ ಸಹಕರಿಸಿದ್ದಾರೆ. ಸೇವೆಯಿಂದ ನಿವೃತ್ತಿ ನಂತರೂ ಸಾರ್ವಜನಿಕರಿಗೆ ನಿಗಮದ ಪ್ರಗತಿ ಬಗ್ಗೆ ಮಾರ್ಗದರ್ಶನ ನೀಡುವೆ ಎಂದರು. ಟಿ.ಸೂರನಾಯಕ, ಡಿ.ಕೆ.ಸೂರಯ್ಯ, ಸಿ.ಟಿ.ಶ್ರೀನಿವಾಸ್, ಮಂಜುನಾಥ, ಸರ್ಪಭೂಷಣ, ಎಲ್‌ಐಸಿ ದುಗ್ಗಾವರರಂಗಸ್ವಾಮಿ, ಕೊರ್ಲಕುಂಟೆ ತಿಪ್ಪೇಸ್ವಾಮಿ, ಸೌಭಾಗ್ಯತಿಪ್ಪೇಸ್ವಾಮಿ, ಕಚೇರಿಯ ಸಿಬ್ಬಂದಿ ಸಮಾರಂಭದಲ್ಲಿ ಭಾಗವಹಿಸಿದ್ದರು.

### ಡಿ.ಉಪ್ಪಾರಹಟ್ಟಿ : ಎನ್‌ಎಸ್‌ಎಸ್‌ಶಿಬಿರ ಸಮಾರೋಪ ಸಮಾರಂಭ



» **ಚಳ್ಳಕೆರೆ**

ರಾಷ್ಟ್ರೀಯ ಸೇವಾ ಯೋಜನಾ ಶಿಬಿರಗಳು ವಿದ್ಯಾರ್ಥಿಗಳ ಭವಿಷ್ಯದ ಬದುಕಿಗೆ ದಿಕ್ಸೂಚಿಯಾಗಲಿವೆ ಎಂದು ಪಿಯು ಮಂಡಳಿಯ ನಿವೃತ್ತ ಜಂಟಿ ನಿರ್ದೇಶಕ ಪಿ.ಎನ್.ಕೃಷ್ಣಪ್ರಸಾದ್ ತಿಳಿಸಿದರು. ಅವರು, ದೊಡ್ಡೇರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಡಿ.ಉಪ್ಪಾರಹಟ್ಟಿ ಗ್ರಾಮದಲ್ಲಿ ನಗರದ ಸರ್ಕಾರಿ ಪದವಿಪೂರ್ವ ಕಾಲೇಜಿನ ರಾಷ್ಟ್ರೀಯ ಯೋಜನಾ ಶಿಬಿರದ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ಗ್ರಾಮೀಣ ಭಾಗಗಳಲ್ಲಿ ವಿದ್ಯಾರ್ಥಿಗಳಿಗೆ ಪೂರಕವಾದ ವಾತಾವಣ ನಿರ್ಮಾಣವಾಗುತ್ತದೆ. ಕಾರಣ, ಇಲ್ಲಿಯ ಜನರು ಎಲ್ಲರನ್ನೂ, ಎಲ್ಲವನ್ನೂ ಪ್ರೀತಿಸುತ್ತಾರೆ. ನಾವು ಏನೇ ಹೇಳಿದರೂ ಅದನ್ನು ವಿಶ್ವಾಸದಿಂದ ಸ್ವೀಕರಿಸುವ ಗುಣ ಗ್ರಾಮಸ್ಥರದಲ್ಲಿದೆ. ಇಂತಹ ಉತ್ತಮ ವಾತಾವರಣದಲ್ಲಿ ಶಿಬಿರ ನಡೆಸಿರುವುದು ಸಂತಸ ತಂದಿದ್ದು, ಕಾಲೇಜಿನ ಪ್ರಾಚಾರ್ಯ ಎಂ.ರವೀಶ್, ಶಿಬಿರಾಧಿಕಾರಿ ಬಿ.ಶಾಂತಕುಮಾರಿ ಸಹಕಾರ ನೀಡಿದ ಗ್ರಾಮಸ್ಥರು ಹಾಗೂ ಶಿಬಿರಾರ್ಥಿಗಳನ್ನು ಅಭಿನಂದಿಸುವುದಾಗಿ ತಿಳಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಶಿಬಿರಾಧಿಕಾರಿ ಬಿ.ಶಾಂತಕುಮಾರಿ, ಉತ್ತಮ ಕಾರ್ಯಕ್ಕೆ ಎಲ್ಲಾ ರೀತಿಯ ಸಹಕಾರ ಸುಲಭವಾಗಿ ದೊರೆಯುತ್ತದೆ ಎಂಬುವುದಕ್ಕೆ ಇಲ್ಲಿನ ಶಿಬಿರ ಸಾಕ್ಷಿ. ಪ್ರಾರಂಭದಲ್ಲಿ ಇಲ್ಲಿ ಶಿಬಿರ ಆರಂಭಿಸಲು ಯತ್ನಿಸಿದಾಗ ಆತಂಕ ಉಂಟಾಗಿತ್ತು. ಆದರೆ, ಇಡೀ ಗ್ರಾಮವೇ ನಮಗೆ ಸಹಕಾರ ನೀಡಿದ್ದಲ್ಲದೆ, ಹಲವಾರು ಕಾರ್ಯಕ್ರಮಗಳಲ್ಲಿ ಸ್ವಯಂ ಪ್ರೇರಣೆಯಿಂದ ಭಾಗವಹಿಸಿದ್ದಾರೆ. ಶಿಬಿರಾರ್ಥಿಗಳಿಗೆ ಉತ್ತಮ ಸಹಕಾರ ನೀಡಿದ್ದಾರೆಂದರು. ದಿವ್ಯಸಾನಿಧ್ಯ ವಹಿಸಿದ್ದ ಕರಿಬಸವೇಶ್ವರಸ್ವಾಮಿ ಮಾತನಾಡಿ, ಆಧುನಿಕತೆಯ ಕಾಲದಲ್ಲೂ ಸಹ ನಾವು ಮೂಡನಂಬಿಕೆ ಮತ್ತು ಮೌಢ್ಯಗಳಿಗೆ ಆಧ್ಯತೆ ನೀಡುತ್ತೇವೆ. ಗ್ರಾಮೀಣ ಭಾಗದ ಜನರಿಗೆ ಇನ್ನೂ ಹಲವಾರು ವಿಚಾರಗಳಲ್ಲಿ ಜಾಗೃತಿ ಮೂಡಿಸುವ ಕಾರ್ಯ ನಡೆಯಬೇಕು. ಸರ್ಕಾರ, ಸಂಘ ಸಂಸ್ಥೆಗಳು ಗ್ರಾಮೀಣ ಜನರಲ್ಲಿ ಬೆರೆಯುವ ಸಂದರ್ಭಗಳು ಕಡಿಮೆ ಎಂದರು. ದೊಡ್ಡೇರಿ ಗ್ರಾಮ ಪಂಚಾಯಿತಿ ಅಧ್ಯಕ್ಷ ವೆಂಕಟೇಶ್, ಸದಸ್ಯರಾದ ಸಿರಿಗೊಂಡಪ್ಪ ಹಾಜರಿದ್ದರು.

# ಸರ್ಕಾರದ 5 ಗ್ಯಾರಂಟಿ ಜನರಿಗೆ ತಲುಪಿಸಿ

» **ಚಿತ್ರದುರ್ಗ**

ಕಾಂಗ್ರೆಸ್ ಪಕ್ಷ ನೀಡಿದ ಐದು ಗ್ಯಾರೆಂಟಿಗಳು ಉತ್ತಮವಾಗಿದ್ದು, ಇವುಗಳನ್ನು ಜನರ ಮನಕ್ಕೆ ತಲುಪುವಂತ ಕಾರ್ಯವನ್ನು ಮಾಡುವುದು ಅನಿವಾರ್ಯವಾಗಿದೆ ಇದು ಮುಂಬರುವ ಲೋಕಸಭಾ ಚುನಾವಣೆಗೆ ಅನುಕೂಲವಾಗಲಿದೆ ಎಂದು ಶಾಸಕ ಕೆ.ಸಿ.ವಿರೇಂದ್ರ ಪಪ್ಪಿ ತಿಳಿಸಿದರು.



ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಇಂದು ಆಚರಿಸಿದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಕನ್ನಡಾಂಬೆಯ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಶಾಸಕರು, ಕಾಂಗ್ರೆಸ್ ಪಕ್ಷ ಚುನಾವಣೆ ಸಮಯದಲ್ಲಿ ಮತದಾರರಿಗೆ ನೀಡಿದ ಭರವಸೆಯಂತೆ ಐದು ಗ್ಯಾರೆಂಟಿಗಳನ್ನು ಈಡೇರಿಸಿದೆ ಇದನ್ನು ಮತದಾರರ ಮನಕ್ಕೆ ತಲುಪಿಸುವಂತ ಕಾರ್ಯವನ್ನು ಪಕ್ಷದ ಕಾರ್ಯಕರ್ತರು ಮಾಡಬೇಕಿದೆ. ಈ ರೀತಿ ಮಾಡುವುದರಿಂದ ಮುಂಬರುವ ಲೋಕಸಭಾ ಚುನಾವಣೆಗೆ ಅನುಕೂಲವಾಗಲಿದೆ. ಈ ಹಿನ್ನಲೆಯಲ್ಲಿ ಪಕ್ಷದ ಕಾರ್ಯಕರ್ತರು ಇದರ ಬಗ್ಗೆ ಹೆಚ್ಚಿನ ಗಮನವನ್ನು ನೀಡಬೇಕಿದೆ ಎಂದು ಶಾಸಕ ವಿರೇಂದ್ರ ಪಪ್ಪಿ ಕರೆ ನೀಡಿದರು.

ರಾಜ್ಯದ ಮುಖ್ಯಮಂತ್ರಿಗಳು ನಮ್ಮ ಕನ್ನಡ ರಾಜ್ಯೋತ್ಸವವನ್ನು ಚನ್ನಾಗಿ ಆಚರಣೆ ಮಾಡುವಂತೆ ಸೂಚನೆಯನ್ನು ನೀಡಿದ್ದಾರೆ. ಅದರಂತೆ ನಾವುಗಳೆಲ್ಲಾ ನಮ್ಮ ಮನೆಯ ಮುಂದೆ ಕನ್ನಡದ ರಂಗೋಲಿಯನ್ನು ಹಾಕುವುದರ ಮೂಲಕ ರಾತ್ರಿ ದೀಪವನ್ನು ಬೆಳಗುವುದರ ಮೂಲಕ ಕನ್ನಡ ರಾಜ್ಯೋತ್ಸವವನ್ನು ಆಚರಣೆ ಮಾಡಬೇಕಿದೆ ಎಂದರು.

ಡಿಸಿಸಿ ಅಧ್ಯಕ್ಷರಾದ ಎಂ.ಕೆ.ತಾಜ್‌ಪೀರ್ ಮಾತನಾಡಿ, ಚಿತ್ರದುರ್ಗ ವಿಧಾನಸಭಾ ಕ್ಷೇತ್ರದಲ್ಲಿ ಕಳೆದ ಹಲವಾರು ವರ್ಷಗಳಿಂದ ಶಾಸಕರಿಲ್ಲದೆ ಸೊರಗಿತ್ತು, ಕಳೆದ 50 ವರ್ಷದಲ್ಲಿ ಈಗ ಮೂರನೇ ಅವದಿಯಲ್ಲಿ ಶಾಸಕರನ್ನು ಕಂಡಿದ್ದೇವೆ, ಶಾಸಕರ ಸಮ್ಮುಖದಲ್ಲಿ ಕಾರ್ಯಕ್ರಮ ನಡೆಸುವುದು ಖುಷಿಯಾದ ಸಂಗತಿಯಾಗಿದೆ. ರಾಜ್ಯ ಮಟ್ಟದಲ್ಲಿ ಶಾಸಕರಾದವರನ್ನು ಸೇರ್ಪಡೆ ಮಾಡುವಂತ ಕಾರ್ಯವನ್ನು ಮಾಡಲಾಗುವುದು ಉಳಿದವರನ್ನು ಜಿಲ್ಲಾ ಮಟ್ಟದಲ್ಲಿಯೇ ಸೇರಿಸಿಕೊಳ್ಳುವ ಕಾರ್ಯವನ್ನು ಮಾಡುವಂತೆ ಕೆಪಿಸಿಸಿ ಅಧ್ಯಕ್ಷ ಸೂಚನೆಯ ಮೇರೆಗೆ ಇಂದು ಹಲವಾರು ಜನರನ್ನು ಕಾಂಗ್ರೆಸ್ ಪಕ್ಷಕ್ಕೆ ಸೇರಿಸಿಕೊಳ್ಳಲಾಗುತ್ತಿದೆ ಎಂದರು. ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಈ ಬಾರಿ 135 ಸ್ಥಾನಗಳನ್ನು ಗೆಲುವುದರ ಮೂಲಕ ದಾಖಲೆಯನ್ನು ಮಾಡಿದೆ ಇದೇ ರೀತಿ ಮುಂಬರುವ ಲೋಕಸಬಾ ಚುನಾವಣೆಯಲ್ಲಿಯೂ ಸಹಾ ರಾಜ್ಯದಲ್ಲಿ ಇರುವ 28 ಸ್ಥಾನಗಳಲ್ಲಿ ಅಧಿಕ ಸ್ಥಾನಗಳನ್ನು ಗೆಲ್ಲಬೇಕಿದೆ ಇದಕ್ಕೆ ಈಗಿನಿಂದಲೇ ತಯಾರಿಯನ್ನು ಮಾಡಿಕೊಳ್ಳಬೇಕಿದೆ ಈ ಹಿನ್ನಲೆಯಲ್ಲಿ ಪಕ್ಷಕ್ಕೆ ಸೇರುವವರ ಸಂಖ್ಯೆ ಅಧಿಕವಾರದಷ್ಟು ನಮಗೆ ಲಾಭವಾಗಲಿದೆ ಎಂದು ತಾಜ್‌ಪೀರ್ ತಿಳಿಸಿ ನ. 9 ರಂದು ಸೇವಾದಳಕ್ಕೆ 100 ವರ್ಷವಾದ ಹಿನ್ನಲೆಯಲ್ಲಿ ಬೆಂಗಳೂರಿನಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಇದಕ್ಕೆ ಚಿತ್ರದುರ್ಗದಿಂದ ಬಹಳಷ್ಟು ಜನತೆ ಭಾಗವಹಿಸಬೇಕಿದೆ ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾಂಗ್ರೆಸ್‌ನ ಮಹಿಳಾ ಘಟಕದ ಅಧ್ಯಕ್ಷರಾದ ಶ್ರೀಮತಿ ಗೀತಾ ನಂದಿನಿ ಗೌಡ, ಪ್ರಧಾನ ಕಾರ್ಯದರ್ಶಿಗಳಾದ ಸಂಪತ್ ಕುಮಾರ್, ಮೈಲಾರಪ್ಪ, ಕುಶಲ ಕರ್ಮಿ ಘಟಕದ ರಾಜ್ಯಾಧ್ಯಕ್ಷರಾದ ಪ್ರಸನ್ನ ಕುಮಾರ್, ಓಬಿಸಿಯ ಎನ್.ಡಿ.ಕುಮಾರ್, ನಜ್ಮತಾಜ್, ಮೀನಾಕ್ಷಿ, ಭಾಗ್ಯಮ್ಮ, ಸುಧಾ, ಖಾಸಿಂಆಲಿ, ಶ್ರೀಮತಿ ಮೋಕ್ಷಾ ರುದ್ರಸ್ವಾಮಿ, ತಿಪ್ಪೇಸ್ವಾಮಿ, ಲೋಕೇಶ್, ಅಲ್ಲಾಭಕ್ಷಿ, ಚೋಟು, ಮುದಸಿರ್ ನವಾಜ್, ಷಬ್ಬೀರ್ ಸೇರಿದಂತೆ ಇತರರು ಭಾಗವಹಿಸಿದ್ದರು.

## ಕನ್ನಡ ರಾಜ್ಯೋತ್ಸವ: 28 ಸಾಧಕರಿಗೆ ಸಚಿವರಿಂದ ಸನ್ಮಾನ










» **ಚಿತ್ರದುರ್ಗ**

ಜಿಲ್ಲಾಡಳಿತದ ವತಿಯಿಂದ ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ಬುಧವಾರ ಏರ್ಪಡಿಸಿದ ಜಿಲ್ಲಾ ಮಟ್ಟದ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ, ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸುತ್ತಿರುವ ಜಿಲ್ಲೆಯ 28 ಜನ ಸಾಧಕರಿಗೆ ಜಿಲ್ಲಾ ಉಸ್ತುವಾರಿ ಹಾಗೂ ಯೋಜನೆ ಮತ್ತು ಸಾಂಖ್ಯಿಕ ಸಚಿವರಾದ ಡಿ. ಸುಧಾಕರ್ ಅವರು ಸನ್ಮಾನಿಸಿ ಗೌರವಿಸಿದರು.

ಸನ್ಮಾನಿತಗೊಂಡವರ ವಿವರ ಇಂತಿದೆ. ವರ್ಷ, ಆದಿವಾಲ, ಹಿರಿಯೂರು ತಾಲ್ಲೂಕು– ಕ್ರೀಡಾ ಕ್ಷೇತ್ರ (ವಿಶೇಷ ಚೇತನರು). ಶ್ರೇಯ ಬಿನ್ ಕೆ. ಕುಮಾರಸ್ವಾಮಿ, ಚಿತ್ರದುರ್ಗ– ಕ್ರೀಡೆ, ರವಿ ಅಂಬೇಕರ್ ಯೋಗ ತರಬೇತುದಾರರು, ಚಿತ್ರದುರ್ಗ–(ಕ್ರೀಡೆ). ಡಾ. ಆರ್.ಎ. ದಯಾನಂದಮೂರ್ತಿ, ಚಳ್ಳಕೆರೆ– ಕೃಷಿ. ಕೆ.ಸಿ. ಹೊರಕೇರಪ್ಪ, ಹಿರಿಯೂರು– ಕೃಷಿ. ಮೋಹನ ಮುರಳಿ, ಚಿತ್ರದುರ್ಗ– ಚಿತ್ರಕಲೆ. ಟಿ.ಎಂ. ವೀರೇಶ್, ಚಿತ್ರದುರ್ಗ– ಚಿತ್ರಕಲೆ. ಜಿ. ಪರಶುರಾಮ, ಚಿತ್ರದುರ್ಗ– ಭೂವಿಜ್ಞಾನಿ.

ಡಾ. ದೀಪಕ್ ಆರ್.ಎಸ್., ಚಿತ್ರದುರ್ಗ– ಸಂಶೋಧನೆ. ಡಾ. ಪಿ.ವಿ. ಶ್ರೀಧರ ಮೂರ್ತಿ, ಚಿತ್ರದುರ್ಗ– ವೈದ್ಯಕೀಯ. ಡಾ. ಬಿ. ಚಂದ್ರನಾಯ್ಕ್, ನವಜಾತ ಶಿಶು ಮತ್ತು ಮಕ್ಕಳ ತಜ್ಞರು, ಚಿತ್ರದುರ್ಗ– ವೈದ್ಯಕೀಯ. ಹನುಮಂತಪ್ಪ, ಹೊಸದುರ್ಗ– ಶಿಕ್ಷಣ. ಜಿ.ಎಸ್. ವಸಂತ, ಮೊಳಕಾಲ್ಮೂರು ತಾಲ್ಲೂಕು– ಶಿಕ್ಷಣ. ಡಾ. ಸ್ವಾಮ್ಯ, ಕೆಳಗೋಟೆ– ಸಮಾಜಸೇವೆ. ವೀಣಾ ಗೌರಣ್ಣ, ಚಿತ್ರದುರ್ಗ– ಸಮಾಜ ಸೇವೆ. ಪ್ರೊ. ಜಿ. ಪರಮೇಶ್ವರಪ್ಪ, ಚಿತ್ರದುರ್ಗ– ಸಾಹಿತ್ಯ. ಬಾಗೂರು ಆರ್. ನಾಗರಾಜಪ್ಪ, ಹೊಸದುರ್ಗ ತಾಲ್ಲೂಕು– ಸಾಹಿತ್ಯ. ಎಸ್.ಡಿ. ರಾಮಸ್ವಾಮಿ, ಚಿತ್ರದುರ್ಗ– ರಂಗಭೂಮಿ. ಡಿ. ಶ್ರೀಕುಮಾರ್, ಚಿತ್ರದುರ್ಗ– ರಂಗಭೂಮಿ. ಶೈಲಜ ಸುದರ್ಶನ್, ಚಿತ್ರದುರ್ಗ– ಸಂಗೀತ. ಡಿ.ಓ. ಮುರಾರ್ಜಿ, ಚಿಕ್ಕೋಬನಹಳ್ಳಿ– ಸಂಗೀತ. ಜಿ. ರಾಜಣ್ಣ, ಚಿತ್ರದುರ್ಗ– ಜಾನಪದ. ಶ್ರೀನಿವಾಸ, ಚಿಕ್ಕುಂತಿ, ಮೊಳಕಾಲ್ಮೂರು ತಾಲ್ಲೂಕು– ಜಾನಪದ.

ಲಕ್ಷ್ಮಣ ಹೆಚ್., ವರದಿಗಾರರು, ಕ್ರಾಂತಿದೀಪ ಕನ್ನಡ ದಿನಪತ್ರಿಕೆ, ಚಿತ್ರದುರ್ಗ– ಪತ್ರಿಕೋದ್ಯಮ, ರವಿ ಮಲ್ಲಾಪುರ, ಸಂಪಾದಕರು, ನಳಂದ ಕನ್ನಡ ದಿನಪತ್ರಿಕೆ, ಚಿತ್ರದುರ್ಗ– ಪತ್ರಿಕೋದ್ಯಮ, ವೀರೇಶ್ ವಿ., ವರದಿಗಾರರು, ರಿಪಬ್ಲಿಕ್ ಟಿ.ವಿ., ಕನ್ನಡ, ಚಿತ್ರದುರ್ಗ– ಪತ್ರಿಕೋದ್ಯಮ, ಮಂಜುನಾಥ್ ಟಿ.ವಿ.–9 ಕ್ಯಾಮೆರಾಮನ್, ಚಿತ್ರದುರ್ಗ– ಛಾಯಾಗ್ರಹಣ.

ದ್ವಾರಕನಾಥ್, ಕನ್ನಡಪ್ರಭ ಫೋಟೋಗ್ರಾಫರ್, ಚಿತ್ರದುರ್ಗ– ಛಾಯಾಗ್ರಹಣ. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ, ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂಧರ್ ಕುಮಾರ್ ಮೀನಾ, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ತಹಶೀಲ್ದಾರ್ ನಾಗವೇಣಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಶಿವಸ್ವಾಮಿ ಸೇರಿದಂತೆ ವಿವಿಧ ಗಣ್ಯರು ಉಪಸ್ಥಿತರಿದ್ದರು.

## ಪ್ರತಿಯೊಬ್ಬರು ಕನ್ನಡದಲ್ಲಿ ಮಾತನಾಡಬೇಕು: ರವಿಕುಮಾರ್



» **ನಾಯಕನಹಟ್ಟಿ**

ಪ್ರತಿಯೊಬ್ಬರು ಕನ್ನಡದಲ್ಲಿ ಮಾತನಾಡಬೇಕು ಮತ್ತು ಕನ್ನಡ ಭಾಷೆಯನ್ನು ಪ್ರೀತಿಸಬೇಕು ಕನ್ನಡವನ್ನು ಚನ್ನಾಗಿ ಮಾತನಾಡಬೇಕು ನಾವೇಲ್ಲರೂ ಕನ್ನಡವನ್ನು ಉಳಿಸಬೇಕು ಮತ್ತು ಬೆಳಸಬೇಕು ಎಂದು 9ನೇ ವಾರ್ಡ್‌ನ ಪಟ್ಟಣ ಪಂಚಾಯಿತಿ ಸದಸ್ಯರಾದ ರವಿಕುಮಾರ್ ಹೇಳಿದರು.

ನಾಯಕನಹಟ್ಟಿ ಪಟ್ಟಣ ಪಂಚಾಯಿತಿಯಲ್ಲಿ ನಡೆದ 50ನೇ ವರ್ಷದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಕುವೆಂಪು, ದಾ.ರ.ಬೇಂದ್ರೆ, ಶಿವರಾಮ್‌ಕಾರಂತ, ಮಾಸ್ತಿ ವೆಂಕಟೇಶ್ ಆಯ್ಯಂಗರ್, ಗಿರೀಶ್‌ಕಾರ್ನಡ್, ವಿಕೃ ಗೂಕಾಕ್, ಅನಂಥಮೂರ್ತಿ, ಚಂದ್ರಶೇಖರ್ ಕುಂಬಾರ್, ಒಟ್ಟು 8 ಜ್ಞಾನಪೀಠ ಪ್ರಶಸ್ತಿಗಳನ್ನು ಪಡೆದಿದ್ದಾರೆ. 1956 ನವಂಬರ್ 1 ರಂದು ಮೈಸೂರು ಸಾಮ್ರಾಜ್ಯವನ್ನು ಕರ್ನಾಟಕ ಎಂದು ನಾಮಕರಣ ಮಾಡಲಾಯಿತು. ದಕ್ಷಿಣ ಭಾರತದ ಎಲ್ಲಾ ಕನ್ನಡ ಭಾಷೆಗಳನ್ನು ಮಾತನಾಡುವ ಪ್ರದೇಶಗಳಿಗೆ ವಿಂಗಡಿಸಿ ಮೈಸೂರು ರಾಜ್ಯವನ್ನು ಕರ್ನಾಟಕ ಎಂದು ನಾಮಕರಣ ಮಾಡಿದರು ಎಂದು ಅವರು ಮಾತನಾಡಿದರು.

ನಾಯಕನಹಟ್ಟಿ ಪಟ್ಟಣ ಪಂಚಾಯಿತಿಯ 7ನೇ ವಾರ್ಡ್‌ನ ಸದಸ್ಯರಾದ ಸೈಯದ್ ಅನ್ವರ್ ಮಾತನಾಡಿ ಮಕ್ಕಳಿಗೆ ಒಳ್ಳೆ ಶಿಕ್ಷಣ ಕೊಡಬೇಕು ಕಛೇರಿಗಳಲ್ಲಿ ಕನ್ನಡ ಮಾತನಾಡಬೇಕು ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂಬ ನಾಮಕರಣ ಮಾಡಲಾಯಿತು. ಮನೆಗಳಲ್ಲಿ ಕನ್ನಡ ಮಾತನಾಡಬೇಕು ಎಂದು ಹೇಳಿದರು.

50ನೇ ವರ್ಷದ ಕನ್ನಡ ರಾಜ್ಯೋತ್ಸವನ್ನು ಧ್ವಜರೋಹಣ ನೆರೆವೇರಿಸಿದ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಯಾದ ಶಿವಕುಮಾರ್ ಮಾತನಾಡಿ ನಮ್ಮ ನಾಡಿನ ಹಿರಿಮೆಯನ್ನು ಎಲ್ಲರೂ ಎತ್ತಿಹಿಡಿಯೂಣ ಕನ್ನಡ ಭಾಷೆಯನ್ನು ಬೆಳೆಸೋಣ ಕನ್ನಡದ ಮಹತ್ವವನ್ನು ನಾವೇಲ್ಲರೂ ಅರಿಯಬೇಕು ಎಂದು ಅವರು ಮಾತನಾಡಿದರು.

ಈ ಸಂಧರ್ಭದಲ್ಲಿ ಉಪಸ್ಥಿತರಾದ ಪಟ್ಟಣ ಪಂಚಾಯಿತಿ ಸದಸ್ಯರಾದ ದುರುಗಪ್ಪ, ರವಿಕುಮಾರ್, ಸೈಯದ್ ಅನ್ವರ್, ಬಂಗಾರನಾಯಕ, ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿಯಾದ ಶಿವಕುಮಾರ್ ಹಾಗೂ ಪಟ್ಟಣ ಪಂಚಾಯಿತಿಯ ಅರೋಗ್ಯ ನೀರಿಕ್ಷಕರಾದ ಟಿ.ರುದ್ರಮುನಿ, ಮರಿಪಾಲಯ್ಯ, ಎನ್ನಪ್ಪ, ಪಟ್ಟಣ ಪಂಚಾಯಿತಿಯ ಅಧಿಕಾರಿಗಳು ಮತ್ತು ಸಿಬ್ಬಂಧಿಗಳು ಪೌರಕಾರ್ಮಿಕರು ಕರ್ನಾಟಕ ರಕ್ಷಣಾ ವೇದಿಕೆಯ ಅಧ್ಯಕ್ಷರಾದ ಮುತ್ತಯ್ಯ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ಹೊಳಲ್ಕೆರೆ ಪುರಸಭಾ ಕಾರ್ಯಾಲಯದಲ್ಲಿ ರಾಜ್ಯೋತ್ಸವ




ಹೊಳಲ್ಕೆರೆ ಪುರಸಭೆಯಲ್ಲಿ ನಡೆದ ಕನ್ನಡ ರಾಜ್ಯೋತ್ಸವದ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಸದಸ್ಯರು.

**ಹೊಳಲ್ಕೆರೆ** : ಪುರಸಭಾ ಕಾರ್ಯಾಲಯದಲ್ಲಿ 68ನೇ ಕನ್ನಡ ರಾಜ್ಯೋತ್ಸವವನ್ನು ಆಚರಿಸಲಾಯಿತು. ಪುರಸಭೆಯ ಮುಖ್ಯಾಧಿಕಾರಿ ಎ. ವಾಸಿಂ, ಸದಸ್ಯರುಗಳು ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಬಳಿಕ ತಾಯಿ ಭುವನೇಶ್ವರಿಯ ಭಾವಚಿತ್ರಕ್ಕೆ ಪುಷ್ಪಗುಚ್ಛ ಅರ್ಪಿಸಿ, ನಾಡಗೀತೆಯನ್ನು ಹಾಗೂ ಕನ್ನಡ ನಾಡು ನುಡಿಯ ಕುರಿತಾದ ಕನ್ನಡ ಗೀತೆಗಳನ್ನು ಹಾಡುವುದರ ಮೂಲಕ ತಾಯಿ ಕನ್ನಡಾಂಬೆಗೆ ಗೌರವ ನಮನ ಸಲ್ಲಿಸಲಾಯಿತು.ರಾಜ್ಯೋತ್ಸವದಲ್ಲಿ ಸದಸ್ಯರುಗಳಾದ ಹೆಚ್.ಆರ್ ನಾಗರತ್ನಮ್ಮ ವೇದಮೂರ್ತಿ, ಪಿ.ಆರ್ ಮಲ್ಲಿಕಾರ್ಜುನ್, ಡಿ.ಎಸ್.ವಿಜಯ, ಬಿ.ಎಸ್ ರುದ್ರಪ್ಪ, ಎಲ್.ವಿಜಯಸಿಂಹ ಖಾಟ್ರೋತ್, ಮಮತ ಜಯಸಿಂಹ ಖಾಟ್ರೋತ್, ಪಿ.ಹೆಚ್.ಮುರುಗೇಶ್, ಶಬೀನ ಅಶ್ರಪುಲ್ಲಾ, ಸೈಯದ್ ಸಜೀಲ್, ಸೈಯದ್ ಮನ್ಸೂರ್, ಪೂರ್ಣಿಮ ಬಸವರಾಜ್, ಸುಧಾ ಬಸವರಾಜ್, ಸವಿತ ನರಸಿಂಹ ಖಾಟ್ರೋತ್, ಬಿ ವಸಂತ ಆರ್ ರಾಜಪ್ಪ, ಪುರಸಭಾ ಸಿಬ್ಬಂದಿಗಳು ಹಾಗೂ ಪೌರಕಾರ್ಮಿಕರು ಭಾಗವಹಿಸಿದ್ದರು.




ಪಟ್ಟಣದ ಪತ್ರಕರ್ತರ ಭವನದಲ್ಲಿ ನಡೆದ ಕನ್ನಡ ರಾಜ್ಯೋತ್ಸವ.

## ಪಟ್ಟಣದ ಪತ್ರಕರ್ತರ ಭವನದಲ್ಲಿ ನಡೆದ ಕನ್ನಡ ರಾಜ್ಯೋತ್ಸವ

**ಹೊಳಲ್ಕೆರೆ:** ಹೊಳಲ್ಕೆರೆ ಪಟ್ಟಣದ ಪತ್ರಕರ್ತರ ಭವನದಲ್ಲಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಈ ಹಿನ್ನಲೆ ಕನ್ನಡ ಮಾತೆಯ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಲಾಗಿತ್ತು. ವಕೀಲರಾದ ಎಸ್.ವೇದಮೂರ್ತಿ ಮಾತನಾಡಿ, ಕನ್ನಡ ನಾಡು ನುಡಿ ಜಲಕ್ಕೋಸ್ಕರ ಅನೇಕ ಹೋರಾಟಗಳು ನಡೆದಿದೆ. ಸಾವಿರಾರು ವರ್ಷಗಳ ಇತಿಹಾಸದ ಕನ್ನಡ ಭಾಷೆಯನ್ನು ಉಳಿಸುವ ಬೆಳೆಸುವ ಕಾರ್ಯ ಆಗಬೇಕೆಂದರು. ತಾಲ್ಲೂಕು ಉಪಾಧ್ಯಕ್ಷರಾದ ಎ.ಚಿತ್ತಪ್ಪ ಮಾತನಾಡಿ, ಸಾವಿರಾರು ವರ್ಷಗಳ ಇತಿಹಾಸ ಹೊಂದಿರುವ ಕನ್ನಡವನ್ನ ಉಳಿಸುವ ಕೆಲಸ ಆಗಬೇಕಿದೆ. ಈ ನಿಟ್ಟಿನಲ್ಲಿ ನಿರಂತ ಹೋರಾಟ ಕೈಗೊಳ್ಳಬೇಕೆಂದರು. ಪತ್ರಕರ್ತೆ ನಿಶಾ, ಸುರೇಶ್, ಮದುಸೂಧನ್, ರವಿ ಮಲ್ಲಾಡಿಹಳ್ಳಿ, ಬಿ.ಜಿ.ಹಳ್ಳಿ ವೆಂಕಟೇಶ್ ಹಾಜರಿದ್ದರು.

## ಫಾಸ್ಟ್ ನ್ಯೂಸ್



ಚನ್ನಗಿರಿ ಕ್ಷೇತ್ರದ ಶಾಸಕರಾದ ಬಸವರಾಜು ವಿ ಶಿವಗಂಗಾ ಅವರು ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನಾರದ ಸಂತೇಬೆನ್ನೂರಿನ ಪತ್ರಕರ್ತರಾದ ಕೆ ಎಸ್ ವಿರೇಶ್ ಪ್ರಸಾದ್ ಅವರನ್ನ ದಾವಣಗೆರೆ ಕಚೇರಿಯಲ್ಲಿ ಸನ್ಮಾನಿಸಿ ಗೌರಸಿದರು. ಈ ವೇಳೆ ಸಂತೇಬೆನ್ನೂರು ಗ್ರಾಮ ಪಂಚಾಯಿತಿ ಸದಸ್ಯರಾದ ಶಿವರಾಜ್, ಆಸೀಫ್ ಸೇರಿದಂತೆ ಅವರ ಹಿತೈಷಿಗಳು ಉಪಸ್ಥಿತರಿದ್ದರು.

## ತಿಮ್ಮಪ್ಪಯ್ಯನಹಳ್ಳಿ ಗ್ರಾ.ಪಂನಲ್ಲಿ ಕನ್ನಡ ರಾಜ್ಯೋತ್ಸವ



» ನಾಯಕನಹಟ್ಟಿ

ಪೋಷಕರು ಮಕ್ಕಳಿಗೆ ಶಿಕ್ಷಣ ಕೊಡಿ, ಶಿಕ್ಷಣದಿಂದಲೆ ನಿಮ್ಮ ಮಕ್ಕಳು ಮುಂದುವರೆಯಲು ಸಾಧ್ಯವೆಂದು ಗ್ರಾ.ಪಂ ಅಧ್ಯಕ್ಷೆ ಅನಿತಾ ರವಿಕುಮಾರ್ ಹೇಳಿದರು. ನಾಯಕನಹಟ್ಟಿ ಹೋಬಳಿಯ ತಿಮ್ಮಪ್ಪಯ್ಯನಹಳ್ಳಿ ಗ್ರಾಮದಲ್ಲಿ ಗ್ರಾ.ಪಂ ಯಲ್ಲಿ 68ನೇ ಕನ್ನಡ ರಾಜ್ಯೋತ್ಸವ ದಿನಾಚರಣೆ ಆಚರಿಸಲಾಯಿತು. ನಂತರ ಮಾತನಾಡಿದ ಅವರು ಕನ್ನಡ ಮಾತನಾಡಿದರೆ ನಮ್ಮ ಜೀವನದಲ್ಲಿ ಯಶಸ್ವಿಗೆ ಕಾರಣ ಭೂತರಾಗುತ್ತಾರೆ ಎಂದು ಹೇಳಿದರು. ನವಂಬರ್ ತಿಂಗಳಲ್ಲಿ ಮಾತ್ರ ಕನ್ನಡಿಗರಾಗದೇ ಸಾಲದು ಪ್ರತಿ ನಿತ್ಯ ನಾವು ಕನ್ನಡಿಗರಾಗಿರಬೇಕು, ಕನ್ನಡವೇ ನಮ್ಮ ಉಸಿರಾಗಿರಬೇಕು ಎಂದು ಮಾತನಾಡಿದರು. ಗ್ರಾ.ಪಂ ಕಾರ್ಯದರ್ಶಿಯಾದಿ ಬಿ.ನಾಗರಾಜ ನಾಯ್ಕ ಕನ್ನಡ ಉಳುವಿಗೆ ಕನ್ನಡ ಬೆಳಿಸಿ ಎನ್ನುವುದನ್ನು ನಿಲ್ಲಿಸಿ ಕನ್ನಡವನ್ನು ಬಳಸಿ ಬೆಳಸುವ ಕೆಲಸವಾಗಬೇಕಾಗಿದೆ. ಕನ್ನಡದ ಸಂಸ್ಕೃತಿಯನ್ನು ಎಂದಿಗೂ ಮರೆಯದೆ ಗೌರವಿಸಿ ಬೆಳಸಿ ಎಂದರು. ಈ ಸಂದರ್ಭದಲ್ಲಿ ಉಪಸ್ಥಿತರಾದ ಗ್ರಾ.ಪಂ ಉಪಾಧ್ಯಕ್ಷೆ ಲಕ್ಷ್ಮೀ ಮಹದೇವಣ್ಣ, ಪಿಡಿಓ ಶ್ರೀನಿವಾಸ್, ಸದಸ್ಯರಾದ ಅಶೋಕ್, ರೇವಣ್ಣ, ಶೈಲಾ, ಕ್ಲರ್ಕ್ ತಿಪ್ಪೇಸ್ವಾಮಿ, ಕಂಪ್ಯೂಟರ್ ಆಪರೇಟರ್ ಸಂತೋಷ್, ಕಾಯಕ ಮಿತ್ರ ಉಮಾ, ಇನ್ನೂ ಗ್ರಾ.ಪಂ. ಸದಸ್ಯರು, ಸಿಬ್ಬಂದಿಗಳು ಇದ್ದರು.



ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ 68ನೇ ಕರ್ನಾಟಕ ರಾಜ್ಯೋತ್ಸವ ಸಂದರ್ಭದಲ್ಲಿ ಇಂದು ಕನ್ನಡಪರ ಹೋರಾಟದಲ್ಲಿನ ಸೇವೆ ಗುರುತಿಸಿ ಜಿಲ್ಲಾ ಕ್ರೀಡಾಂಗಣದಲ್ಲಿ ವಿಶ್ವ ಕರ್ನಾಟಕ ರಕ್ಷಣಾ ವೇದಿಕೆಯ ಖಜಾಂಚಿ ಎಂ. ರವಿ ಅವರಿಗೆ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಯಿತು.

## ರಿಯಾಯಿತಿ ದರದಲ್ಲಿ ಪುಸ್ತಕ ಮಾರಾಟ

» ದಾವಣಗೆರೆ

ಕನ್ನಡ ರಾಜ್ಯೋತ್ಸವದ ಅಂಗವಾಗಿ 2023 ರ ನವೆಂಬರ್ ತಿಂಗಳು ಪೂರ್ತಿ ಕನ್ನಡ ಪುಸ್ತಕ ಪ್ರಾಧಿಕಾರದ ಎಲ್ಲಾ ಪುಸ್ತಕಗಳನ್ನು ಶೇ.50 ರಷ್ಟು ರಿಯಾಯಿತಿ ದರಗಳಲ್ಲಿ ಬೆಂಗಳೂರಿನ ಕನ್ನಡ ಭವನದ ಸಿರಿಗನ್ನಡ ಪುಸ್ತಕ ಮಳಿಗೆಯಲ್ಲಿ (ಸಂಪರ್ಕ ಸಂಖ್ಯೆ:080–22107705)ಹಾಗೂ ಎಲ್ಲಾ ಜಿಲ್ಲೆಗಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದಿಂದ ತೆರೆಯಲಾದ ಎಲ್ಲಾ ಸಿರಿ ಗನ್ನಡ ಪುಸ್ತಕ ಮಾರಾಟ ಮಳಿಗೆಗಳಲ್ಲಿ ಈ ರಿಯಾಯಿತಿ ಸೌಲಭ್ಯ ದೊರೆಯಲಿದೆ.

### ಕರ್ನಾಟಕ 50ರ ಸಂಭ್ರಮ: ಆಕರ್ಷಕ ಸ್ತಬ್ದಚಿತ್ರ ಮೆರವಣಿಗೆ

# ಕೋಟೆ ನಾಡಲ್ಲಿ ಮೊಳಗಿದ ಕನ್ನಡದ ಕಹಳೆ

» ಚಿತ್ರದುರ್ಗ

ಕರ್ನಾಟಕ ಎಂದು ನಾಮಕರಣಗೊಂಡ ಸುವರ್ಣ ಸಂಭ್ರಮದ ನಡುವೆ ಕೋಟೆ ನಾಡು ಚಿತ್ರದುರ್ಗ ನಗರದಲ್ಲಿ ಅದ್ದೂರಿಯಾಗಿ ಆಚರಿಸಲಾದ 68ನೇ ಕನ್ನಡ ರಾಜ್ಯೋತ್ಸವದ ಅಂಗವಾಗಿ ನಗರದಲ್ಲಿ ಭವ್ಯ ಮೆರವಣಿಗೆ ಜೊತೆಗೆ ವಿವಿಧ ಇಲಾಖೆಗಳ ಸ್ತಬ್ಧ ಚಿತ್ರದ ಮೆರವಣಿಗೆ ವಿಜೃಂಭಣೆಯಿಂದ ನೆರವೇರಿತು.

ನಗರದ ನೀಲಕಂಠೇಶ್ವರ ದೇವಸ್ಥಾನದ ಬಳಿ ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ 'ತಾಯಿ ಭುವನೇಶ್ವರಿ ದೇವಿ' ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಆಕರ್ಷಕ ಸ್ತಬ್ಧ ಚಿತ್ರದ ಮೆರವಣಿಗೆಗೆ ಚಾಲನೆ ನೀಡಿದರು.









ಕನ್ನಡಾಂಬೆಭುವನೇಶ್ವರಿಯಭಾವಚಿತ್ರದ ಮೆರವಣಿಗೆಯಲ್ಲಿ ಕಹಳೆ ವಾದನ, ಹಗಲು ವೇಷ, ತಾಶರಂ ಡೋಲು ಸೇರಿದಂತೆ ವಿವಿಧ ಕಲಾತಂಡಗಳು ಪಾಲ್ಗೊಂಡಿದ್ದವು. ಪೂರ್ಣಕುಂಭ ಹೊತ್ತ ಮಹಿಳೆಯರು ಮೆರವಣಿಗೆಯ ಮುಂಚೂಣಿಯಲ್ಲಿದ್ದು, ಕನ್ನಡಾಂಬೆಯ ಹಬ್ಬಕ್ಕೆ ಶುಭ ಕೋರುವಂತೆ ಕಂಡುಬಂದಿತು.

ಶಿಕ್ಷಣದ ಶಕ್ತಿ ಸಾರಿದ ಚಂದ್ರಯಾನ : ಶಿಕ್ಷಣದ ಶಕ್ತಿ ಸಾರುವ ಶಾಲಾ ಶಿಕ್ಷಣ ಇಲಾಖೆಯ ಸ್ತಬ್ಧ ಚಿತ್ರ, ದೇಶದಲ್ಲಿ ವೈಜ್ಞಾನಿಕ ಮನೋಭಾವ ಮೂಡಿಸುವ ಮೂಲಕ ಚಂದ್ರಯಾನ ಸಾಧನೆ ಶಿಕ್ಷಣ ಹೇಗೆ ಇಂಬು ನೀಡಿದೆ ಎಂಬುದನ್ನು ಸಾದರ ಪಡಿಸಿತು. ಇದರೊಂದಿಗೆ ಶಾಲಾ ಶಿಕ್ಷಣ ಇಲಾಖೆ ಯೋಜನೆಗಳ ಬಗ್ಗೆ ಮಾಹಿತಿ ನೀಡಿತು.

ಗಮನ ಸೆಳೆದ ನಾರಿಶಕ್ತಿ ಹಾಗೂ ಶಕ್ತಿಯೋಜನೆ : ಪ್ರವಾಸೋದ್ಯಮ ಇಲಾಖೆಯ ದೇಶದ ನಾರಿಯರ ಸಾಧನೆ ಅನಾವರಣಗೊಳಿಸಿದ ನಾರಿಶಕ್ತಿಯ ಸ್ತಬ್ಧ ಚಿತ್ರ ಎಲ್ಲರ ಗಮನ ಸೆಳೆಯಿತು. ದೇಶದ ಪ್ರಸ್ತುತ ರಾಷ್ಟ್ರಪತಿ ದ್ರೌಪದಿ ಮುರ್ಮು, ಶರಣೆ ಅಕ್ಕಮಹಾದೇವಿ, ವೀರ ವನಿತೆ ಒನಕೆ ಓಬವ್ವ, ಸಾಲುಮರದ ತಿಮ್ಮಕ್ಕ, ಬಾಹ್ಯಾಕಾಶ ಯಾತ್ರಿ ಕಲ್ಪನಾ ಚಾವ್ಲಾ, ಒಲಂಪಿಕ್ ಪದಕ ವಿಜೇತ ಬಾಕ್ಸಿಂಗ್ ಪಟು ಮೇರಿ ಕೋಮ್ ಅವರ ಭಾವಚಿತ್ರಗಳು ನಾರಶಕ್ತಿ ಸ್ತಬ್ಧ ಚಿತ್ರದಲ್ಲಿ ಕಂಗೊಳಿಸಿದವು. ರಾಜ್ಯದ ಎಲ್ಲಾ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣದ ಸೌಕರ್ಯ ಕಲ್ಪಿಸಿದ ಸರ್ಕಾರದ ಮಹತ್ವಾಕಾಂಕ್ಷೆ ಶಕ್ತಿ ಯೋಜನೆ ಮಹತ್ವವನ್ನು ಸಾರಿಗೆ ಇಲಾಖೆ ಸ್ತಬ್ಧ ಚಿತ್ರ ಗಮನ ಸೆಳೆಯಿತು.

ಬಾಲ್ಯವಿವಾಹ ಶಿಕ್ಷಾರ್ಹ ಅಪರಾಧ : ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣ ಘಟಕದ ವತಿಯಿಂದ ನಿರ್ಮಿಸಲಾದ ಸ್ತಬ್ಧ ಚಿತ್ರ ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ ಎನ್ನುವುದನ್ನು ಎಚ್ಚರಿಸಿತು. ಬಾಲ್ಯ ವಿವಾಹಕ್ಕೆ ಕಾರಣರಾದರೆ ಕಾನೂನಿ ಪ್ರಕಾರ ಜೈಲು ಶಿಕ್ಷೆಗೆ ಗುರಿಯಾಗಬೇಕಾಗುತ್ತದೆ.





ಮಕ್ಕಳ ಹಕ್ಕುಗಳನ್ನು ಗೌರವಿಸಿ ಮಕ್ಕಳ ಸರ್ವತೋಮುಖ ಬೆಳವಣಿಗೆ ಸಹಕಾರಿಯಾಗಲು ಸರ್ಕಾರ ತಂದಿರುವ ಯೋಜನೆಗಳ ಮಾಹಿತಿ ನೀಡಿತು.

ಸರ್ಕಾರಿ ಯೋಜನೆಗಳ ಮಾಹಿತಿ : ಬೆಸ್ಕಾಂನ ಗೃಹಜ್ಯೋತಿ, ಆರೋಗ್ಯ ಇಲಾಖೆಯ ಸ್ತನ್ಯಪಾನ ಮಹತ್ವ ಸಾರುವ ಹಾಗೂ ಅರಣ್ಯ, ಕೃಷಿ, ಅಬಕಾರಿ ಇಲಾಖೆ, ನಗರ ಸಭೆ, ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯ ಸ್ತಬ್ದ ಚಿತ್ರಗಳು ಸರ್ಕಾರ ಯೋಜನೆಯ ಮಾಹಿತಿ ನೀಡಿದವು. ಪೂರ್ಣಕುಂಭ ಹೊತ್ತ ಮಹಿಳೆಯರು, ಶಾಲೆ ಮಕ್ಕಳು, ಕಹಳೆ, ಡೋಲು ಸೇರಿದಂತೆ ಸಾಂಸ್ಕೃತಿಕ ಕಲಾ ತಂಡಗಳು ಸ್ಥಬ್ದ ಚಿತ್ರ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

ಗಾಂಧಿ ವೃತ್ತ, ಎಸ್.ಬಿ.ಎಂ ವೃತ್ತ, ಓಬವ್ವ ವೃತ್ತದ ಮೂಲಕ ಮೆರವಣಿಗೆ ಪೊಲೀಸ್ ಕವಾಯತು ಮೈದಾನ ತಲುಪಿತು. ಶಿಕ್ಷಣ ಇಲಾಖೆ ಚಂದ್ರಯಾನ, ಸಾರಿಗೆ ಇಲಾಖೆ ಶಕ್ತಿ ಯೋಜನೆ, ಅರಣ ಇಲಾಖೆ ವನ್ಯಜೀವಿ ಸಂರಕ್ಷಣೆ ಮಹತ್ವ ಸಾರಿದ ಸ್ತಬ್ಧ ಚಿತ್ರಗಳು ಅನುಕ್ರಮವಾಗಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದವು. ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂಧರ್ ಮೀನಾ, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ನಗರ ಸಭೆ ಆಯುಕ್ತೆ ರೇಣುಕಾ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್, ಕನ್ನಡ ಮತ್ತು ಸಂಸ್ಕೃತ ಇಲಾಖೆ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ ಭಾಗವಹಿಸಿದ್ದರು.

## ಬಚ್ಚಬೋರನಹಟ್ಟಿಯಲ್ಲಿ ವಾಲ್ಮೀಕಿ ಜಯಂತಿ ಆಚರಣೆ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಬಚ್ಚಬೋರನಹಟ್ಟಿ ಗ್ರಾಮದಲ್ಲಿ ಬುಧವಾರ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಸಂಭ್ರಮದಿಂದ ಆಚರಿಸಲಾಯಿತು. ಗ್ರಾಮದ ಕಣಿವೆ ಮಾರಮ್ಮ ದೇಗುಲದ ಮುಂಭಾಗದಲ್ಲಿರುವ ಮಹರ್ಷಿ ವಾಲ್ಮೀಕಿ ಭಾವಚಿತ್ರಕ್ಕೆ ಗ್ರಾಮಸ್ಥರು ಪುಷ್ಪನಮನ ಸಲ್ಲಿಸಿದರು. ಜಯಂತಿ ಅಂಗವಾಗಿ ಗ್ರಾಮದ ಮುಖ್ಯ ಬೀದಿಗಳಲ್ಲಿ ಮೆರವಣಿಗೆ ನಡೆಸಲಾಯಿತು. ಈ ಸಂದಭದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾದ ಅನಿತಾ ಬಸವರಾಜ್, ಗಂಗಮ್ಮ ಪಾಪಣ್ಣ, ಕೆ.ಬಿ.ಕೃಷ್ಣಮೂರ್ತಿ ಹಾಗೂ ಮಾಜಿ ಗ್ರಾಮ ಪಂಚಾಯಿತಿ ಸದಸ್ಯರು, ಗ್ರಾಮಸ್ಥರು ಇದ್ದರು.



### ಪ್ರಮುಖ ಸುದ್ದಿ

# ತಾಯ್ನಾಡಿನ ಭಾಷೆಯ ಪ್ರೀತಿ, ವಾತ್ಸಲ್ಯದಿಂದ ನಾಡು ಬೆಳಗಲಿದೆ







» ಮೊದಲ ಪುಟದಿಂದ

ಇಂದು ನಮ್ಮ ಕನ್ನಡ ಬಂಧುಗಳು ವಿಶೇಷವಾಗಿ ಯುವ ಪ್ರತಿಭೆಗಳು ಜಗತ್ತಿನಾದ್ಯಂತ ಕನ್ನಡದ ಜ್ಯೋತಿಯನ್ನು ಹಚ್ಚುತ್ತಿದ್ದಾರೆ, ಕನ್ನಡ ನೆಲದ ಮೂಲದ ಕಂಪನವನ್ನು ಬಿತ್ತುತ್ತಿದ್ದಾರೆ, ಬೀರುತ್ತಿದ್ದಾರೆ "ಉದಯವಾಗಲಿ ನಮ್ಮ ಚೆಲುವ ಕನ್ನಡನಾಡು" ಎಂದು ಆರಂಭವಾದ ಕನ್ನಡನಾಡು ನುಡಿಕಟ್ಟುವ ಕೆಲಸ "ಇವನಾರವ ಇವನಾರವ ಎಂದೆನಿಸದೆ, ಇವ ನಮ್ಮವ ಇವ ನಮ್ಮವ ಎಂದೆವಿಸುತ್ತಾ" ಎಲ್ಲಾ ಜಾತಿ ಜನಾಂಗಗಳು ಅರಿಸಿನ ಕುಂಕುಮವಿಟ್ಟು ಬಾಗೀನ ಕೊಡುವಂತೆ, ಹಳದಿ ಕೆಂಪು ಬಣ್ಣದ ಬಾವುಟವನ್ನು ಜಗತ್ತಿನಾದ್ಯಂತ ಹಾರಿಸುವ ಮೂಲಕ, ನರನಾಡಿಗಳನ್ನು ಹೊಸೆದು, ಬೌದ್ಧಿಕ ಶಕ್ತಿಯ ಜ್ಯೋತಿಯ ಮುಟ್ಟಿಸಿ, ಹಚ್ಚಿ ಬೆಳಗಿಸುತ್ತಿರುವ ಕನ್ನಡದ ದೀಪ ಕತ್ತಲ ಜಗತ್ತಿಗೆ ಬೆಳಕು ನೀಡುವಂಥಹುದಾಗಿದೆ "ಹೊಸ ನೆತ್ತರುಕ್ಕಿ ಆರಿಹೋಗದ ಮುನ್ನ, ಕಟ್ಟೋಣ ಬನ್ನಿ ಹೊಸ ನಾಡೊಂದನ್ನು ರಸದ ಬೀಡೊಂದನ್ನು" ಎಂದು ಕನ್ನಡದ ಮರಿ ಸಿಂಹಗಳನ್ನು ಬಡಿದೆಬ್ಬಿಸುವ, ಬೆನ್ನು ತಟ್ಟಿ ಪ್ರೋತ್ಸಾಹಿಸುವ ಮೂಲಕ, ಕನ್ನಡ ಭಾಷೆ ಮತ್ತು ಸಂಸ್ಕೃತಿಗಳು ನಮ್ಮ ಮೂಲ ಸಂಸ್ಕೃತಿ ಎನ್ನುವುದನ್ನು, ಸ್ವಾವಲಂಬಿ ಸ್ವಾಭಿಮಾನದ ಬದುಕಿನ ಮೂಲ ಸೆಲಗಳೆನ್ನುವುದನ್ನು ಮನದಟ್ಟು ಮಾಡಿಕೊಡಬೇಕಿದೆ. ಸದಭಿರುಚಿಯ ಪ್ರೇರಣೆಗಳು ಮಾತ್ರ ಸುಂದರ ಬದುಕನ್ನು ಕಟ್ಟಿಕೊಡಬಲ್ಲವು ಎನ್ನುವುದನ್ನು ಸಾಬೀತುಪಡಿಸಬೇಕಿದೆ. ಅದಕ್ಕಾಗಿ ಅಗತ್ಯವಿರುವ ಶಿಕ್ಷಣ, ಸಾಹಿತ್ಯ, ಕಲೆ, ಕೌಶಲ್ಯಗಳನ್ನು ಅನ್ವೇಷಿಸಿ, ಅನುಷ್ಠಾನಗೊಳಿಸುವ ಸಾಮೂಹಿಕ ಪ್ರಯತ್ನಗಳು ಬೇಕಿವೆ ಎಂದರು.

ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ: ಜ್ಞಾನ ಭಾರತಿ ಶಾಲೆಯ ವಿದ್ಯಾರ್ಥಿಗಳು ಹಾಗೂ ಸಂತ ಜೋಸೆಫ್ ಶಾಲೆಯ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಕನ್ನಡ ನಾಡು–ನುಡಿ ಸಂಸ್ಕೃತಿ ಹಾಗೂ ಮಹತ್ವ ಸಾರುವಂತಹ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು.

'ಅವ್ವ ಕಣೋ ಕನ್ನಡ, ನಮ್ ಜೀವ ಕಣೋ ಕನ್ನಡ', 'ಹುಟ್ಟಿದರೆ ಕನ್ನಡ ನಾಡಲ್ಲಿ ಹುಟ್ಟಬೇಕು', 'ಕನ್ನಡವೇ ನಮ್ಮಮ್ಮ ಅವಳಿಗೆ ಕೈ ಮುಗಿಯಮ್ಮ' ಚಿತ್ರಗೀತೆಗಳಿಗೆ ಅಮೋಘ ಎನಿಸುವ ರೀತಿಯಲ್ಲಿ ವಿದ್ಯಾರ್ಥಿಗಳು ಭಾವಾಭಿನಯದೊಂದಿಗೆ ನೃತ್ಯ ಪ್ರದರ್ಶಿಸಿದರು.

ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನ: ಕನ್ನಡ ರಾಜ್ಯೋತ್ಸವದ ಅಂಗವಾಗಿ ಜಿಲ್ಲಾಡಳಿತದ ವತಿಯಿಂದ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ 28 ಮಂದಿ ಸಾಧಕರಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಸನ್ಮಾನಿಸಿದರು.

ಕನ್ನಡಾಂಭೆಗೆ ನುಡಿನಮನ: ಕರ್ನಾಟಕಕ್ಕೆ 50ರ ಸಂಭ್ರಮಾಚರಣೆ ಹಿನ್ನೆಲೆಯಲ್ಲಿ ನಾಡಿನ ಹೆಸರಾಂತ 05 ಕವಿಗಳು ರಚಿಸಿರುವ ಗೀತೆಗಳನ್ನು ರಾಜ್ಯೋತ್ಸವ ಸಮಾರಂಭದಲ್ಲಿ ಜಿಲ್ಲೆಯ ಕಲಾವಿದರು ಹಾಡಿದರು.

ಹುಯಿಲಗೋಳ ನಾರಾಯಣರಾಯರು ರಚಿಸಿರುವ "ಉದಯವಾಗಲಿ ನಮ್ಮ ಚೆಲುವ ಕನ್ನಡ ನಾಡು", ಕುವೆಂಪು ರಚಿತ "ಎಲ್ಲಾದರು ಇರು ಎಂತಾದರು ಇರು", ದ.ರಾ.ಬೇಂದ್ರ ರಚಿಸಿರುವ "ಒಂದೇ ಒಂದೇ ಕರ್ನಾಟಕ ಒಂದೇ", ಸಿದ್ದಯ್ಯ ಪುರಾಣಿಕರು ರಚಿಸಿರುವ "ಹೊತ್ತಿತೋ ಹೊತ್ತಿತು ಕನ್ನಡದ ದೀಪ", ಹಾಗೂ ಚನ್ನವೀರ ಕಣವಿ ಅವರು ಬರೆದಿರುವ "ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ" ಎಂಬ 05 ಗೀತೆಗಳನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಕಲಾವಿದರು ತಂಡವು ಗೀತ ಗಾಯನ ಪ್ರಸ್ತುತ ಪಡಿಸಿತು.

ಕಾರ್ಯಕ್ರಮದಲ್ಲಿ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ, ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂಧರ್ ಕುಮಾರ್ ಮೀನಾ, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ, ತಹಶೀಲ್ದಾರ್ ನಾಗವೇಣಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಶಿವಸ್ವಾಮಿ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು, ಶಾಲಾ ಕಾಲೇಜು ವಿದ್ಯಾರ್ಥಿಗಳು, ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು, ಸಾರ್ವಜನಿಕರು ಇದ್ದರು. ಶಿವರಾಂ ಹಾಗೂ ಗಣೇಶಯ್ಯ ಅವರು ಕಾರ್ಯಕ್ರಮದ ನಿರೂಪಣೆ ನಿರ್ವಹಿಸಿದರು.

## ಫಾಸ್ಟ್ ನ್ಯೂಸ್

### ನೆಲಗೇತನಹಟ್ಟಿ ಗ್ರಾ.ಪಂನಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆ




» **ನಾಯಕನಹಟ್ಟಿ**

ನಾವು ಕೇವಲ ನವಂಬರ್ ಕನ್ನಡಿಗರಾಗದೆ ಕನ್ನಡನಾಡಿನ ಜವಬ್ದಾರಿ ಪ್ರಜೆಯಾಗಿ ಕನ್ನಡ ಮಾತನಾಡೋಣ ಎಂದು ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರಾದ ಹಾಲಿ ಸದಸ್ಯರಾದ ಪಿ.ಎಂ. ಮುತ್ತಯ್ಯಹೇಳಿದರು.ನಾಯಕನಹಟ್ಟಿಹೋಬಳಿಯ ನೆಲಗೇತನಹಟ್ಟಿ ಗ್ರಾಮ ಪಂಚಾಯಿತಿಯಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸಿದರು. ನಂತರ ಮಾತನಾಡಿದ ಅವರು ಕನ್ನಡನಾಡು ಎಂಬ ಹೆಸರಿಗೆ ಒಂದು ಶಕ್ತಿ ಇದೆ. ನವಂಬರ್ 01 ರಂದು ನಾವೇಲ್ಲರೂ ಅತ್ಯಂತ ಸಡಗರ ಸಂಭ್ರಮದಿಂದ ಇಲ್ಲಿಯ ಜನರು ಸೇರಿ ಕನ್ನಡ ರಾಜ್ಯೋತ್ಸವ ಆಚರಿಸುತ್ತೇವೆ ಎಂದು ಅವರು ಮಾತನಾಡಿದರು. ನೆಲಗೇತನಹಟ್ಟಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರಾಜಣ್ಣ, ಗ್ರಾಮ ಪಂಚಾಯಿತಿ ಸದಸ್ಯರು, ಸಿಬ್ಬಂದಿಗಳು, ಮಹಿಳೆಯರು ಹಾಗೂ ಇನ್ನೂ ಇತರರು ಇದ್ದರು.

### ಎಲೆಬೇತೂರು ಪ್ರೌಢಶಾಲೆಯಲ್ಲಿ ಸಡಗರ ಸಂಭ್ರಮದಿಂದ ಕನ್ನಡ ರಾಜ್ಯೋತ್ಸವ ಆಚರಣೆ



» **ಎಲೆಬೇತೂರು**

ಇಲ್ಲಿನ ಶ್ರೀ ಕೊಂಡಜ್ಜಿ ಬಸಪ್ಪ ಕನ್ನಡ ಮಾಧ್ಯಮ ಪ್ರೌಢಶಾಲೆ, ಶ್ರೀ ತರಳಬಾಳು ಆಂಗ್ಲ ಮಾಧ್ಯಮ ನರ್ಸರಿ, ಹಿರಿಯ ಪ್ರಾಥಮಿಕ ಮತ್ತು ಪೌಢಶಾಲೆ ಹಾಗೂ ಕನ್ನಡ ಸಾಹಿತ್ಯ ಪರಿಷತ್ತು ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವವನ್ನು ಸಡಗರ, ಸಂಭ್ರಮಗಳಿಂದ ಆಚರಿಸಲಾಯಿತು. ಆರಂಭದಲ್ಲಿ ತಾಯಿ ಭುವನೇಶ್ವರಿದೇವಿಯ ಚಿತ್ರಪಟಕ್ಕೆ ಪೂಜೆ ಸಲ್ಲಿಸಿ ನಾಡಗೀತೆ ಮತ್ತು ಹುಯಿಲಗೊಳ ನಾರಾಯಣರಾಯರ ಉದಯವಾಗಲಿ ನಮ್ಮ ಚೆಲುವ ಕನ್ನಡ ನಾಡು..., ಕುವೆಂಪು ಅವರ ಎಲ್ಲಾದರೂ ಇರು ಎಂತಾದರೂ ಇರು..., ದ ರಾ ಬೇಂದ್ರೆಯವರ ಒಂದೇ ಒಂದೇ ಒಂದೇ ಕರ್ನಾಟಕ ಒಂದೇ..., ಡಾ. ಸಿದ್ದಯ್ಯ ಪುರಾಣಿಕ್ ಅವರ ಹೊತ್ತಿತೋ ಹೊತ್ತಿತೋಕನ್ನಡದ ದೀಪ..., ಚನ್ನವೀರ ಕಣವಿಯವರ ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ... ಕನ್ನಡ ಗೀತೆಗಳನ್ನು ಸಾಮೂಹಿಕವಾಗಿ ಹಾಡಲಾಯಿತು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ದಾವಣಗೆರೆಯ ಸಮಾಜ ಸೇವಕರು, ಚಿಂತಕರು ಮತ್ತು ಕರುಣಾ ಜೀವ ಟ್ರಸ್ಟ್‌ನ ಮುಖ್ಯಸ್ಥರಾದ ಶಿವನಕೆರೆ ಬಸವಲಿಂಗಪ್ಪ, ದಾವಣಗೆರೆ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ನಿರ್ದೇಶಕರಾದ ಎಲೆಬೇತೂರಿನ ಷಡಕ್ಷರಪ್ಪ, ಸ್ಥಳೀಯ ಸಲಹ ಸಮಿತಿಯ ಅಧ್ಯಕ್ಷರಾದ ಹೆಚ್ ಬಸವರಾಜಪ್ಪ ಮತ್ತು ಕನ್ನಡ ಅಧ್ಯಾಪಕ ಎಸ್ ಆರ್ ನಾಗರಾಜ್ ಕನ್ನಡದ ಇತಿಹಾಸ, ಹಿರಿಮೆ-ಗರಿಮೆಗಳ ಕುರಿತು ಮಾತನಾಡಿದರು. ಎ ಕೆ ಪೌಂಡೇಷನ್‌ನಮುಖ್ಯಸ್ಥರಾದಬಿಕೊಟ್ರೇಶ್ ಶಾಲೆಗೆ ಅಂದಾಜು 25 ಸಾವಿರ ಮೌಲ್ಯದ ಧ್ವನಿವರ್ಧಕ ನೀಡಿ ಮಾತನಾಡಿದರು. ಸಭೆಯ ಅಧ್ಯಕ್ಷತೆಯನ್ನು ಸ್ಥಳೀಯ ಸಲಹ ಸಮಿತಿಯ ಅಧ್ಯಕ್ಷರಾದ ಎಂ ಬಸವರಾಜಪ್ಪ ವಹಿಸಿ ಮಾತನಾಡಿದರು. ವೇದಿಕೆಯ ಮೇಲೆ ಉಭಯ ಶಾಲೆಗಳ ಸ್ಥಳೀಯ ಸಲಹಾ ಸಮಿತಿಯ ಸದಸ್ಯರಾದ ಕೊಟ್ರೇಶ್, ರಾಜಣ್ಣ, ಅಧ್ಯಾಪಕ ಹೆಚ್ ಎಸ್ ದ್ಯಾಮೇಶ್, ಎಸ್ ಓ ಷಣ್ಮುಖಪ್ಪ, ಅನಿತಾ ಉಪಸ್ಥಿತರಿದ್ದರು. ವಿದ್ಯಾರ್ಥಿಗಳಾದ ನೂತನ್ ಕೆ, ಮೇಘನಾ ಬಿ, ಲಕ್ಷ್ಮೀ ಆರ್, ಪೂಜಾ ಟಿ ಆರ್, ಸುಪ್ರಭೆ ಡಿ ಎಸ್ ಕನ್ನಡ ಭಾಷೆ ಕುರಿತು ಮಾತನಾಡಿದರು. ವಿದ್ಯಾರ್ಥಿಗಳು 'ಹಚ್ಚೇವು ಕನ್ನಡದ ದೀಪ' ಮತ್ತು 'ಕನ್ನಡ ನಾಡಿನ ಮುದ್ದುಮಕ್ಕಳೇ' ಎನ್ನುವ ಗೀತೆಗಳಿಗೆ ಆಕರ್ಷಕ ನೃತ್ಯರೂಪಕ ನೀಡಿದರು. ಒಂದೆರಡು ವಿದ್ಯಾರ್ಥಿಗಳು ಕಿತ್ತೂರು ರಾಣಿ ಚೆನ್ನಮ್ಮ ಮತ್ತು ರಾಷ್ಟ್ರ ಕವಿ ಕುವೆಂಪು ಅವರ ವೇಷಭೂಷಣಗಳನ್ನು ಧರಿಸಿ ಆಗಮಿಸಿದ್ದು ಎಲ್ಲರ ಗಮನ ಸೆಳೆಯಿತು. ಸಿಂಚನಾ ಮತ್ತು ಸಂಗಡಿಗರು 'ಬಾರಿಸು ಕನ್ನಡ ಡಿಂಡಿಮ' ಮತ್ತು 'ಕರುನಾಡ ತಾಯಿ ಸದಾ ಚಿನ್ಮಯಿ' ಎನ್ನುವ ಕನ್ನಡ ಹಾಡುಗಳನ್ನು ಯಶ್ವಂತ್ ಹಾಡಿದರು. ಮುಖ್ಯೋಪಾಧ್ಯಾಯಿನಿ ಎಂ ಬಿ ಪ್ರೇಮಾ ಸ್ವಾಗತಿಸಿದರೆ ಮತ್ತೋರ್ವ ಮುಖ್ಯೋಪಾಧ್ಯಾಯಿನಿ ಬಿ ಎಂ ಶಶಿಕಲಾ ಕಾಯಕ್ರಮ ನಿರ್ವಹಿಸಿದರು.

# ಚಲುವ ಕನ್ನಡ ನಾಡಿನ ಹಿರಿಮೆ, ಗರಿಮೆ, ಆದರ್ಶಗಳನ್ನು ಎತ್ತಿಹಿಡಿಯುವ ಸಂಕಲ್ಪ ಮಾಡೋಣ: ರಘುಮೂರ್ತಿ





» **ಚಳ್ಳಕೆರೆ**

ಮೈಸೂರು ಅರಸ ಸಂಸ್ಥಾನದ ಸವಿನೆನಪಿಗಾಗಿ ಮೈಸೂರ ರಾಜ್ಯವೆಂದು ಕರೆಸಿಕೊಳ್ಳುತ್ತಿದ್ದ ಕನ್ನಡ ನಾಡು 1973ರಲ್ಲಿ ಕರ್ನಾಟಕ ರಾಜ್ಯವಾಗಿ ಪರಿವರ್ತನೆ ಹೊಂದಿದ್ದು, ಕರ್ನಾಟಕ ರಾಜ್ಯ 50ನೇ ವರ್ಷದ ಸುವರ್ಣ ರಾಜ್ಯೋತ್ಸವವನ್ನು ನಾವೆಲ್ಲರೂ ಸಂಭ್ರಮದಿಂದ ಆಚರಿಸುತ್ತಿದ್ದೇವೆ. ಕನ್ನಡಿಗರ ಸ್ವಾಭಿಮಾನ, ಆತ್ಮಾಭಿಮಾನ ಹಾಗೂ ಕನ್ನಡ ಭಾಷೆಗೆ ಸಂಪೂರ್ಣ ಬೆಳವಣಿಗೆಗೆ ನಾವೆಲ್ಲರೂ ಕಂಕಣಬದ್ಧರಾಗಬೇಕೆಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ನಗರದ ಬಿಎಂ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ 68ನೇ ಕನ್ನಡ ರಾಜ್ಯೋತ್ಸವವನ್ನು ಉದ್ಘಾಟಿಸಿ, ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ವಿಶ್ವದಲ್ಲಿ ಭಾರತ ತನ್ನದೇಯಾದ ವೈವಿಧ್ಯತೆ ಸಾರಿದೆ. ಕರ್ನಾಟಕದಲ್ಲಿ ಮದಕರಿನಾಯಕ ನಾಡು ಚಿತ್ರದುರ್ಗ ಕೋಟೆನಾಡಿನ ಬೀಡಾಗಿದೆ. ಜಿಲ್ಲೆಯ ಚಳ್ಳಕೆರೆ ಸಾಹಿತ್ಯ ಕ್ಷೇತ್ರಕ್ಕೆ ಅಮೋಘ ಕೊಡುಗೆ ಒದಗಿಸಿದೆ. ತಳುಕಿನ ತರಾಸು, ವೆಂಕಣಯ್ಯ, ಬೆಳಗೆರೆ ಕೃಷ್ಣಶಾಸ್ತ್ರಿ, ಜಾನಕಮ್ಮ, ಸಿರಿಯಜ್ಜಿ, ಜಾನಪದ ತಜ್ಞ ಮೀರಸಾಬಿಹಳ್ಳಿ ಶಿವಣ್ಣ, ಶಿವಲಿಂಗಪ್ಪ, ತಿಪ್ಪಣ್ಣಮರಿಕುಂಟೆ ಇಂತಹ ಮಹಾನೀಯರ ಪರಿಶ್ರಮದ ಕೊಡುಗೆಯನ್ನು ನಾವೆಂದೂ ಮರೆಯಲು ಸಾಧ್ಯವಿಲ್ಲ. ವಿಶೇಷವಾಗಿ 68ನೇ ಕನ್ನಡ ರಾಜ್ಯೋತ್ಸವ ಚಳ್ಳಕೆರೆ ತಾಲ್ಲೂಕಿಗೆ ವಿಶೇಷತೆಯನ್ನು ತಂದುಕೊಟ್ಟಿದೆ. ಕಾರಣ, ಹಿರಿಯ ರಂಗಕರ್ಮಿ, ಕಾಟಂಲಿಂಗೇಶ್ವರ ನಾಟಕ ಸಂಘ ಸಂಸ್ಥಾಪಕ ಅಧ್ಯಕ್ಷ ಪಿ.ತಿಪ್ಪೇಸ್ವಾಮಿಯವರಿಗೆ ಪ್ರಸ್ತುತ ವರ್ಷದ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ದೊರಕಿದೆ. 2006ರಲ್ಲಿ ನೃತ್ಯನಿಕೇತನದ ಸುಧಾಮೂರ್ತಿ ರಾಜ್ಯೋತ್ಸವ ಪ್ರಶಸ್ತಿ ಪಡೆದಿದ್ದು 17 ವರ್ಷಗಳ ನಂತರ ಚಳ್ಳಕೆರೆ ಈ ಪ್ರಶಸ್ತಿ ಪಡೆಯುವಂತಾಗಿದ್ದು ಹೆಮ್ಮೆ



ವಿಷಯವೆಂದರು. ಧ್ವಜಾರೋಹಣದ ಸಂದೇಶವನ್ನು ವಾಚಿಸಿದ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ತಾಲ್ಲೂಕು ಅಧ್ಯಕ್ಷ, ತಹಶೀಲ್ದಾರ್ ರೇಹಾನ್ ಪಾಷ, ಕನ್ನಡ ರಾಜ್ಯೋತ್ಸವ ಪ್ರತಿಯೊಬ್ಬ ಕನ್ನಡಿಗನ ಸ್ವಾಭಿಮಾನದ ಸಂಕೇತವಾಗಿದೆ. ನಾಡುನುಡಿಗಾಗಿ ನಾವೆಲ್ಲರೂ ಯಾವುದೇ ತ್ಯಾಗಕ್ಕೂ ಸಿದ್ದರಾಗಬೇಕು. ಕನ್ನಡನಾಡಿನಲ್ಲಿ ಕನ್ನಡವೇ ಅಗ್ರಸ್ಥಾನ ವಹಿಸಬೇಕು ಎಂದರು. ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ, ಕಳೆದ ಹಲವಾರು ದಶಕಗಳಿಂದ ಕನ್ನಡ ನಾಡು, ನುಡಿ ರಕ್ಷಣೆಗಾಗಿ ಹಲವಾರು ಮಹಾನೀಯರು ತಮ್ಮದೇಯಾದ ವಿಶೇಷ ಕೊಡುಗೆ ನೀಡಿದ್ದಾರೆ. ಇಂದು ನಾವೆಲ್ಲರೂ ಸಂಪ್ತಬರಿತ, ಸಮೃದ್ಧ, ಸುಂದರ ಕನ್ನಡ ಭಾಷೆಯನ್ನು ನಮ್ಮ ಜೀವನ ಭಾಷೆಯಾಗಿ ರೂಪಿಸಿಕೊಂಡಿದ್ದೇವೆ. ಕನ್ನಡವೇ ನಮ್ಮೆಲ್ಲರ ಉಸಿರು, ಬದುಕು. ಆದರೆ, ಇತ್ತೀಚಿನ ದಿನಗಳಲ್ಲಿ ಯುವ ಜನಾಂಗ ಕನ್ನಡ ಭಾಷೆಯ ಬೆಳವಣಿಗೆಯ ಬಗ್ಗೆ ನಿರ್ಲಕ್ಷ್ಯವಹಿಸುತ್ತಿರುವುದು ಸರಿಯಲ್ಲ. ನಾವೆಲ್ಲರೂ ಸದಾಕಾಲ ಕನ್ನಡ ಭಾಷೆ, ನುಡಿ, ಸಂಸ್ಕೃತಿ, ಸಂಪ್ರದಾಯವನ್ನು ಕಾಪಾಡಿಕೊಂಡು ಬರಬೇಕು ಎಂದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ರಂಗಕರ್ಮಿ ಬೋರಯ್ಯ, ಗೋವಿಂದರಾಜು, ಆನಂದಕುಮಾರ್, ಪಿ.ಜಗದೀಶ್, ಶ್ರೀರಾಮರೆಡ್ಡಿ, ಲೋಕೇಶ್, ಶಿವಲಿಂಗಪ್ಪ, ಮಂಜುನಾಥ, ಟಿ.ಜೆ. ವೆಂಕಟೇಶ್, ಎಚ್.ಎನ್.ಆದರ್ಶ, ಡಿ.ಶ್ರೀನಿವಾಸ್, ವಿಜಯಕುಮಾರ್ ಇವರನ್ನು ಸನ್ಮಾನಿಸಲಾಯಿತು. ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟ ಸ್ವಾಮಿವಿವೇಕಾನಂದ, ಆದರ್ಶ, ವಿದ್ಯಾಭಾರತಿ, ಚಿನ್ಮಯಿ ಶಾಲೆಗಳಿಗೆ ಬಹುಮಾನ ನೀಡಲಾಯಿತು.

ಕಾರ್ಯಕ್ರಮದಲ್ಲಿ ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಎಂ.ಜೆ.ರಾಘವೇಂದ್ರ, ಸದಸ್ಯರಾದ ಸಿ.ಶ್ರೀನಿವಾಸ್, ಕೆ.ವೀರಭದ್ರಪ್ಪ, ಎಸ್.ಜಯಣ್ಣ, ವೆಂಕಟೇಶ್, ಸುಮ, ನಿರ್ಮಲ, ಸುಜಾತ, ಜೈತುಂಬಿ, ಕವಿತಾ, ಸುಮಕ್ಕ, ಡಿವೈಎಸ್ಪಿ ರಾಜಣ್ಣ, ವೃತ್ತ ನಿರೀಕ್ಷಕ ಕೆ.ಸಮೀವುಲ್ಲಾ, ರಾಜಫಕೃದ್ದೀನ್ ದೇಸಾಯಿ, ಸಮಾಜ ಕಲ್ಯಾಣಾಧಿಕಾರಿ ಮಂಜುನಾಥ, ಬಿಸಿಎಂ ಅಧಿಕಾರಿ ದಿವಾಕರ್, ಎಸ್ಟಿ ಅಧಿಕಾರಿ ಶಿವರಾಜು, ಕೃಷಿ ಇಲಾಖೆ ಅಧಿಕಾರಿ ಅಶೋಕ್, ಪಶುವೈದ್ಯ ಅಧಿಕಾರಿ ರೇವಣ್ಣ, ಬಿಇಒ ಕೆ.ಎಸ್.ಸುರೇಶ್,ಪೌರಾಯುಕ್ತಸಿ.ಚಂದ್ರಪ್ಪ, ಕಂದಾಯಾಧಿಕಾರಿ ಲಿಂಗೇಗೌಡ ಮುಂತಾದವರು ಪಾಲ್ಗೊಂಡಿದ್ದರು.

# ಗೃಹರಕ್ಷಕ ದಳದ ಕಾರ್ಯ ಶ್ಲಾಘನೀಯ






» **ಚಳ್ಳಕೆರೆ**

ಸಾರ್ವಜನಿಕರಿಗೆ ರಕ್ಷಣೆ ನೀಡುವುದೂ ಸೇರಿದಂತೆ ಹಲವಾರು ಸಮಸ್ಯೆಗಳಲ್ಲಿ ಪೊಲೀಸ್ ಇಲಾಖೆ ಸಹಕಾರ ನೀಡಿದರೆ, ಪೊಲೀಸ್ ಇಲಾಖೆಯ ಕಾನೂನು ಸುವ್ಯವಸ್ಥೆಯೂ ಸೇರಿದಂತೆ ಎಲ್ಲಾ ಕೆಲಸ ಕಾರ್ಯಗಳಿಗೆ ಗೃಹರಕ್ಷಕದಳ ನೆರವು ನೀಡುತ್ತಿದ್ದು, ಎರಡೂ ಇಲಾಖೆಗಳ ಸಹಯೋಗದೊಂದಿಗೆ ಎಲ್ಲೆಡೆ ಉತ್ತಮ ವಾತಾವರಣ ನೆಲೆಸಿದೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಕನ್ನಡ ರಾಜ್ಯೋತ್ಸವದ 68ನೇ ವರ್ಷದ ಸವಿನೆನಪಿನ ಅಂಗವಾಗಿ ನಗರ ಹಳೇತಾಲ್ಲೂಕು ಕಚೇರಿ ಕೊಠಡಿಯಲ್ಲಿ ನೂತನವಾಗಿ ಗೃಹರಕ್ಷಕ ದಳದ ಕಚೇರಿಯನ್ನು ಉದ್ಘಾಟಿಸಿ ಮಾತನಾಡಿದರು. ಉದ್ಘಾಟನೆ ಸಂದರ್ಭದಲ್ಲಿ ಗೃಹ ರಕ್ಷಕ ದಳ ಮಾನವೀಯ ಸದ್ಗುಣಗಳನ್ನು ಪ್ರದರ್ಶಿಸಿದೆ. ಉಚಿತ ರಕ್ತದಾನ ಶಿಬಿರದ ಮೂಲಕ ಸಮಾಜಮುಖಿ ಕಾರ್ಯಕ್ಕೆ ಕೈಜೋಡಿಸಿದೆ ಎಂದು ಸರತಸ ವ್ಯಕ್ತಪಡಿಸಿದರು. ಗೃಹ ರಕ್ಷಕ ದಳದ ಜಿಲ್ಲಾ ಕಮಾಂಡೆಟ್ ಸಂಧ್ಯಾ ಪ್ರಾಸ್ತಾವಿಕವಾಗಿ ಮಾತನಾಡಿ, ಜಿಲ್ಲೆಯಲ್ಲಿ ಚಳ್ಳಕೆರೆ ತಾಲ್ಲೂಕು ಅತಿ ದೊಡ್ಡ ತಾಲ್ಲೂಕು ಕೇಂದ್ರವಾಗಿದೆ. ಸುಮಾರು ನೂರಕ್ಕೂ ಹೆಚ್ಚು ಗೃಹರಕ್ಷಕ ದಳದ ಸಿಬ್ಬಂದಿ ಇಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಕಾನೂನು ಸುವ್ಯವಸ್ಥೆಯೂ ಸೇರಿದಂತೆ ಹಲವಾರು ಜನಪರ ಕಾರ್ಯಕ್ರಮಗಳಿಗೆ ಪೊಲೀಸ್ ಇಲಾಖೆಯೊಂದಿಗೆ ನಮ್ಮ ಇಲಾಖೆಯೂ ಸಹ ಸೇರಿ ಕಾರ್ಯನಿರ್ವಹಿಸಲಿದೆ. ಗೃಹ ರಕ್ಷಕ ದಳದ ಕಾರ್ಯನಿರ್ವಹಣೆಗೆ ಕಚೇರಿ ಅವಶ್ಯಕತೆ ಇದ್ದು, ಶಾಸಕರು ನಮ್ಮ ಈ ಬಹುದಿನಗಳ ಬೇಡಿಕೆಯನ್ನು ಈಡೇರಿಸಿರುವುದು ಸಂತಸ ತಂದಿದೆ ಎಂದರು. ತಹಶೀಲ್ದಾರ್ ರೇಹಾನ್ ಪಾಷ ಹಾಗೂ ಗೃಹ ರಕ್ಷಕದಳದ ಸಿಬ್ಬಂದಿ ಉಪಸ್ಥಿತರಿದ್ದರು.



**ಚಳ್ಳಕೆರೆ ತಾಲ್ಲೂಕಿನ ಜಾಜೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಾಮಸಮುದ್ರ ಗ್ರಾಮದಲ್ಲಿ ನರೇಗಾ ಕೂಲಿಕಾರ್ಮಿಕರು 68ನೇ ಕನ್ನಡ ರಾಜ್ಯೋತ್ಸವ ಹಿನ್ನೆಲೆಯಲ್ಲಿ ಭೂಮಿಯಲ್ಲಿ ಕರ್ನಾಟಕ ಭೂಪಟವನ್ನು ರಚಿಸಿ ಕನ್ನಡ ರಾಜ್ಯೋತ್ಸವ ಆಚರಣೆ ಮಾಡಿದರು.**



**ಚಳ್ಳಕೆರೆ ನಗರದ ಬೆಸ್ಕಾಂ ಕಚೇರಿ ಆವರಣದಲ್ಲಿರುವ ಶಕ್ತಿ ಗಣಪತಿ ದೇವಸ್ಥಾನದಲ್ಲಿ ಸಂಕಷ್ಟ, 68ನೇ ಕನ್ನಡ ರಾಜ್ಯೋತ್ಸವ ಹಿನ್ನೆಲೆಯಲ್ಲಿ ಗಣಪತಿಗೆ ನಾಡ ಬಾವುಟದ ಬಣ್ಣವಾದ ಅರಿಶಿನ-ಕುಂಕುಮದಿಂದ ಸಿಂಗಾರಿಸಿ ಪೂಜಿಸಲಾಯಿತು.**

## ಪ್ರಮುಖ ಸುದ್ದಿ

# ಕನ್ನಡನಾಡು ಎಂಬುದೇ ಒಂದು ಅಗಾಧ ಶಕ್ತಿ: ಶಾಸಕ

» **ಹೊಸದುರ್ಗ**

ಕರ್ನಾಟಕ ರಾಜ್ಯ ಕನ್ನಡ ನಾಡು, ಕನ್ನಡಾಂಭೆಯ ನಾಡು, ಕರುನಾಡು, ಕಪ್ಪು ಮಣ್ಣಿನ ನಾಡು ಎಂಬೆಲ್ಲಾ ಹೆಸರುಗಳಿಂದ ಕರೆಯಲ್ಪಡುತ್ತದೆ. ಇಂತಹ ನಾಡಿನಲ್ಲಿ ವಚನಕಾರರು, ಸಾಧುಸಂತರು, ಕೀರ್ತನಕಾರರು, ಶಿವಶರಣರು ಮತ್ತು ಮಹಾನ್ ದಾರ್ಶನಿಕರಿಂದ ಕಂಗೊಳಿಸುತ್ತಿರುವ ಕನ್ನಡ ನಾಡು ಎಂಬ ಹೆಸರೇ ಒಂದು ಅಗಾಧ ಶಕ್ತಿ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಹೇಳಿದರು.

ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಬುಧವಾರ ತಾಲೂಕು ಆಡಳಿತದ ವತಿಯಿಂದ ಆಯೋಜಿಸಿದ್ದ 68ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ದಿವಂಗತ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ್ ಅರಸು ರವರು ಮೈಸೂರು ರಾಜ್ಯವನ್ನು ಕರ್ನಾಟಕ ಎಂದು ಮರುನಾಮಕರಣ ಮಾಡಲು ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸಿ, ಕರ್ನಾಟಕ ರಾಜ್ಯವೆಂದು ಘೋಷಣೆ ಮಾಡಿದರು. ಅದರಂತೆಯೇ ದಿವಂಗತ ಮಾಜಿ ಸಿಎಂ ನಿಜಲಿಂಗಪ್ಪನವರು ಕರ್ನಾಟಕ ರಾಜ್ಯವನ್ನು ಒಗ್ಗೂಡಿಸಲು



ಬಹಳಷ್ಟುಶ್ರಮಿಸಿದ್ದಾರೆ. ಕನ್ನಡ ಭಾಷೆ ಮತ್ತು ಸಾಹಿತ್ಯ ಸಮೃದ್ಧವಾಗಿ ಬೆಳೆದಿದ್ದು,ಥಇದರ ಸತ್ವದಿಂದಾಗಿಯೇ ಕನ್ನಡಕ್ಕೆ 8 ಜ್ಞಾನಪೀಠ ಪ್ರಶಸ್ತಿಗಳು ಲಭಿಸಿವೆ ಎಂದು ಹೇಳಿದರು.

ದೇಶದ 530 ಜಿಲ್ಲೆಗಳಲ್ಲಿ ಭೀಕರ ಬರಗಾಲ ಆವರಿಸಿದ್ದು, ಅದರಂತೆಯೇ ಕರ್ನಾಟಕ ರಾಜ್ಯದಲ್ಲಿ ಬರಗಾಲದ ಛಾಯೆ ಮೂಡಿದೆ. ಇಂತಹ ಕಷ್ಟದ ಸಂದರ್ಭದಲ್ಲಿ ನಾವಿಂದು ಕನ್ನಡ ರಾಜ್ಯೋತ್ಸವ ಆಚರಣೆ ಮಾಡುತ್ತಿದ್ದೇವೆ. ಬರಗಾಲದ ದವಡೆಯಿಂದ ರೈತರನ್ನು ಪಾರು ಮಾಡಲು ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಸನ್ನದ್ಧವಾಗಿವೆ. 2014ರಲ್ಲಿ ಸಿದ್ದರಾಮಯ್ಯನವರು ಭದ್ರಾ ಮೇಲ್ದಂಡೆ ಯೋಜನೆಗೆ ಹೊಸದುರ್ಗದಲ್ಲಿ ಪೂಜೆ ಮಾಡಿ, ಬರಗಾಲವನ್ನು ಮೆಟ್ಟಿನಿಲ್ಲಲು ರೈತರಿಗೆ 23.ಸಾವಿರ ಕೋಟಿ ರೂ. ಗಳ ಯೋಜನೆಗೆ ಅನುಮೋದನೆ ನೀಡಿದ್ದಾರೆ. ಇದೀಗ, ಭದ್ರ ಯೋಜನೆ ಕಾಮಗಾರಿ ತ್ವರಿತಗತಿಯಲ್ಲಿ ಸಾಗುತ್ತಿದ್ದು, ಇನ್ನೂ ಕೆಲವೇ ತಿಂಗಳಲ್ಲಿ ತಾಲೂಕಿಗೆ ಭದ್ರ ನೀರು ಹರಿದು ಬರಲಿವೆ ಎಂದು ತಿಳಿಸಿದರು. ಧ್ವಜಾರೋಹಣ ನೆರವೇರಿಸಿ ತಹಸೀಲ್ದಾರ್ ತಿರುಪತಿ ಪಾಟೀಲ್ ಮಾತನಾಡಿ, ಕನ್ನಡ ಎಂದರೆ ಭಾಷೆಯಲ್ಲ ಭಾವನೆ. ಯಾವುದೇ ಒಬ್ಬ ವ್ಯಕ್ತಿಗೆ ಒಂದು ವಿಷಯವನ್ನು ಮಾತೃಭಾಷೆಯ ಮೂಲಕ ಹೇಳಿದರೆ, ಸ್ಪಷ್ಟವಾಗಿ ಅರ್ಥವಾಗುತ್ತದೆ. ಮಾತೃಭಾಷೆ ಮನಸ್ಸಿನ ಭಾಷೆ ಮತ್ತು ಹೃದಯದ ಭಾಷೆಯಾಗಿದೆ. ಇಂದು ಕನ್ನಡ ಭಾಷೆ ಮತ್ತು ಸಾಹಿತ್ಯ ಬಹಳ ಸಮೃದ್ಧವಾಗಿ ಬೆಳೆದು ನಿಂತಿದೆ. ಕೆಲವರು ಕನ್ನಡ ಮಾತನಾಡಿದರೆ ಕೀಳಿರಿಮೆ ಎಂದು ಭಾವಿಸುತ್ತಾರೆ. ಕನ್ನಡ ಭಾಷೆಯ ಇತಿಹಾಸ, ಮಹತ್ವ ಮತ್ತು ಸತ್ವವನ್ನು ತಿಳಿದುಕೊಂಡವರಾರು ಹೀಗೆ ಭಾವಿಸುವುದಿಲ್ಲ. ಕನ್ನಡಿಗರಾದ ನಾವು ನೆಲ, ಜಲ, ಭಾಷೆಯ ಉಳಿವಿಗೆ ಮುಂದಾಗಬೇಕೆಂದು ಹೇಳಿದರು.

ಕಾರ್ಯಕ್ರಮದ ಮುಖ್ಯಭಾಗವಾಗಿ ಕನ್ನಡ ಭಾಷೆ, ಸಾಹಿತ್ಯ, ನಾಡನುಡಿಗಾಗಿ ಸೇವೆ ಸಲ್ಲಿಸಿರುವವರಿಗೆ ತಾಲೂಕು ಆಡಳಿತದ ವತಿಯಿಂದ ಗೌರವ ಪೂರ್ವಕವಾಗಿ ಸನ್ಮಾನಿಸಿ, ಗೌರವಿಸಲಾಯಿತು. ಶಾಲಾ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆದವು.

ಈ ವೇಳೆ ಕಾರ್ಯಕ್ರಮದಲ್ಲಿ ಪುರಸಭೆ ಮಾಜಿ ಅಧ್ಯಕ್ಷ ಎಂ. ಶ್ರೀನಿವಾಸ್, ಸದಸ್ಯರಾದ ಜ್ಯೋತಿ ಕೆಂಚಪ್ಪ, ದೊಡ್ಡಯ್ಯ, ರಾಮಚಂದ್ರಪ್ಪ, ನಾಗರಾಜ್, ಮಂಜುನಾಥ್, ಪುಷ್ಪಲತಾ, ಶಂಕರಪ್ಪ, ಜಾಫರ್ ಸಾಧಿಕ್, ತಾ.ಪಂ.ಇಒ ಸುನಿಲ್ ಕುಮಾರ್, ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಗಂಗಾಧರಪ್ಪ, ಕಸಾಪ ತಾಲೂಕು ಅಧ್ಯಕ್ಷ ಬಿ.ಪಿ.ಓಂಕಾರಪ್ಪ, ಪೊಲೀಸ್ ಇನ್ಸ್‌ಪೆಕ್ಟರ್ ತಿಮ್ಮಣ್ಣ, ಕ್ಷೇತ್ರ ಶಿಕ್ಷಣಾಧಿಕಾರಿ ಸೈಯದ್ ಮೋಸಿನ್, ಸಹಾಯಕ ಕೃಷಿ ನಿರ್ದೇಶಕ ಈಶ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವಿಸ್ತರಣಾಧಿಕಾರಿ ಶಶಿಧರ್ ಮತ್ತು ಕ್ಷೇತ್ರ ಸಂಪನ್ಮೂಲ ಸಮನ್ವಯ ಶಿಕ್ಷಣಾಧಿಕಾರಿ ಶ್ರೀನಿವಾಸ್ ಸೇರಿದಂತೆ ಸಾರ್ವಜನಿಕರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T